ಸಂಪುಟ : 10 ಸಂಚಿಕೆ: 172 ಪುಟ : 4+2 ಬೆಲೆ: 3.00 ಗುರುವಾರ ಆಗಸ್ಟ್ 14 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 172 Pages : 4+2 Price : 3.00 Thursday August 14 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಆ.16ರಂದು ಕೃಷ್ಣ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ಭಗವಾನ್ ಶ್ರೀ ಕೃಷ್ಣ ಜಯಂತಿಯನ್ನು ನಗದ ಜಿಲ್ಲಾಡಳಿತ ಭವನದ ಅಡಿಟೋರಿಯಂ ಹಾಲ್‌ನಲ್ಲಿ ಆಗಸ್ಟ್ 16 ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರಾದ ಶಿವರಾಜ ಎಸ್ ತಂಗಡಗಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ



ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ ಆಗಮಿಸುವರು.

▶▶ 3ನೇ ಪುಟಕ್ಕೆ

### ಶ್ರೀಕ್ಷೇತ್ರ ಧರ್ಮಸ್ಥಳದ ಕುರಿತು ಅಪಪ್ರಚಾರ ಮಾಡುತ್ತಿರುವವರ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಬೃಹತ್ ಪ್ರತಿಭಟನೆ

## ಭಕ್ತರ ಭಾವನೆಗೆ ಧಕ್ಕೆ ತರುತ್ತಿರುವವರ ಮೇಲೆ ಕ್ರಮವಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀಕ್ಷೇತ್ರ ಧರ್ಮಸ್ಥಳ ಹಾಗೂ ಪೂಜ್ಯ ವೀರೇಂದ್ರ ಹೆಗ್ಗಡೆಯವರು ಮತ್ತು ಕುಟುಂಬದವರ ಹೆಸರಿಗೆ ಕಳಂಕ ಹಾಗೂ ಕೋಟ್ಯಾಂತರ ಭಕ್ತರ ಭಾವನೆಗೆ ಧಕ್ಕೆ ತರುತ್ತಿರುವವರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಶ್ರೀ ಧರ್ಮಸ್ಥಳ ಅಭಿಮಾನಿಗಳ ವೇದಿಕೆಯ ನೇತೃತ್ವದಲ್ಲಿ ವಿವಿಧ ಸಂಘಟನೆಗಳ ಸಾವಿರಾರು ಸದಸ್ಯರು ಬುಧವಾರ ನಗರದ ಅಂಬೇಡ್ಕರ ಭವನದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಜನಜಾಗೃತಿ ವೇದಿಕೆಯ ಮಾಜಿ ಅಧ್ಯಕ್ಷ ಶಿವಪ್ರಕಾಶ ಮಹಾಜನಶೆಟ್ಟರ ಮಾತನಾಡಿ, ಪ್ರಸಿದ್ಧ ಧಾರ್ಮಿಕ ಕೇಂದ್ರ ಧರ್ಮಸ್ಥಳದ ಶ್ರೀಮಂಜುನಾಥ ಸ್ವಾಮಿ ದೇವಾಲಯವು ಶತಮಾನಗಳ



ಇತಿಹಾಸ ಹೊಂದಿದ ಪುಣ್ಯಕ್ಷೇತ್ರ. ಶ್ರೀ ಕ್ಷೇತ್ರದ ಆರಾಧ್ಯ ದೈವ ಮಂಜುನಾಥ ಸ್ವಾಮಿಯು ನಮ್ಮ ನಂಬಿಕೆ. ತಲೆತಲಾಂತರಗಳಿಂದ ನಮ್ಮ ಭಕ್ತಿ ಹಾಗೂ ಸೇವೆಯನ್ನು ಶ್ರೀ ಮಂಜುನಾಥ ಸ್ವಾಮಿಗೆ ಸಲ್ಲಿಸುತ್ತಾ ಬಂದಿದ್ದೇವೆ.

ಅಲ್ಲದೇ, ಧರ್ಮಸ್ಥಳದ ಮಂಜುನಾಥ ಸ್ವಾಮಿ ದೇವಾಲಯವು ಹಿಂದೂಗಳ ಪವಿತ್ರ ಶ್ರದ್ಧಾ ಕೇಂದ್ರವಾಗಿದೆ. ಈ ಕ್ಷೇತ್ರ ಯಾವುದೇ ಜಾತಿ, ಮತ, ಧರ್ಮ ಭೇದವಿಲ್ಲದೇ ಎಲ್ಲರನ್ನೂ ಸಮನಾಗಿ ಕಾಣುವ ಪುಣ್ಯ ಕ್ಷೇತ್ರವಾಗಿರುತ್ತದೆ. ಇಂತಹ ಪುಣ್ಯಕ್ಷೇತ್ರದ ಬಗ್ಗೆ ಗಿರೀಶ ಮಟ್ಟೆಣ್ಣವರ, ಮಹೇಶಶೆಟ್ಟಿ ತಿಮ್ಮರೋಡಿ, ಸಂತೋಷ ಕಡಬ, ಸಮೀರ್ ಎಂ.ಡಿ, ಕುಡ್ಲ ರಾಂಪೇಜ್, ಜಯಂತ ಟಿ ಇವರುಗಳು ಮಂಜುನಾಥ ಸ್ವಾಮಿ ದೇವಾಲಯ ಹಾಗೂ ಧರ್ಮಾಧಿಕಾರಿ ಡಾ. ಡಿ.ವೀರೇಂದ್ರ ಹೆಗ್ಗಡೆ ಇವರಿಗೆ ಕಳಂಕ ತರುವ ಉದ್ದೇಶದಿಂದಲೇ ವಿಡಿಯೋಗಳನ್ನು ಮಾಡಿ ಅದರಲ್ಲಿ ಧರ್ಮಸ್ಥಳಕ್ಕೆ, ಕ್ಷೇತ್ರದ ಆರಾಧ್ಯ ದೇವರಿಗೆ, ಪೂಜ್ಯರಿಗೆ ಕೆಟ್ಟ ರೀತಿಯಲ್ಲಿ ಕೀಳು ಮಟ್ಟದ ಭಾಷೆಗಳಲ್ಲಿ, ಅಸಹ್ಯವೆನಿಸುವ ರೀತಿಯಲ್ಲಿ ಚಿತ್ರೀಕರಿಸಿ ಅದನ್ನು ಸಾಮಾಜಿಕ ಮಾಧ್ಯಮದಲ್ಲಿ ಹರಿಬಿಡುತ್ತಿದ್ದಾರೆ ಎಂದರು.

ಜಿಲ್ಲಾ ಜನಜಾಗೃತಿ ವೇದಿಕೆಯ ಅಧ್ಯಕ್ಷ ಶಿವಾನಂದ ಬೆಂತೂರ ಮಾತನಾಡಿ, ಮಾನ್ಯ ಉಚ್ಛ ನ್ಯಾಯಾಲಯವು ಸಾಮಾಜಿಕ ಮಾಧ್ಯಮಗಳಲ್ಲಿ ಕ್ಷೇತ್ರದ ಬಗ್ಗೆ, ಡಾ. ಡಿ. ವೀರೇಂದ್ರ ಹೆಗ್ಗಡೆ ಹಾಗೂ ಅವರ ಕುಟುಂಬದವರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಬಾರದೆಂದು ಹೊರಡಿಸಿರುವ ಆದೇಶವನ್ನು ಧಿಕ್ಕರಿಸುತ್ತಿರುವ ಇವರ ಮೇಲೆ ಸರಕಾರವು ತಕ್ಷಣ ಕ್ರಮ ಕೈಗೊಳ್ಳಬೇಕು. ಅನಾಮಿಕ ವ್ಯಕ್ತಿಯು ನೀಡಿದ ದೂರಿನ ಆಧಾರದಲ್ಲಿ ಕರ್ನಾಟಕದ ಘನ ಸರ್ಕಾರ ವಿಶೇಷ ತನಿಖಾ ತಂಡವನ್ನು ರಚಿಸಿ ಅದರ ಮೂಲಕ ಎಲ್ಲ ಆಯಾಮಗಳಲ್ಲಿ ತನಿಖೆ ನಡೆಸುತ್ತಿರುವುದನ್ನು ಕ್ಷೇತ್ರದ ಭಕ್ತರಾದ ನಾವು ಗೌರವದಿಂದ ಸ್ವಾಗತಿಸುತ್ತಿದ್ದೇವೆ. ಆದರೆ ಈ ತನಿಖೆಯು ಗೊತ್ತು ▶▶ 3ನೇ ಪುಟಕ್ಕೆ

> ಸಾಮಾಜಿಕ ಮಾಧ್ಯಮದಲ್ಲಿ ಆಧಾರ ರಹಿತ ಸುಳ್ಳು ಸುದ್ದಿ ಹಬ್ಬಿಸಿ, ಧರ್ಮ ನಿಂದನೆ ಮಾಡಿ, ಧರ್ಮ– ಧರ್ಮಗಳ ನಡುವೆ ಕಂದಕವನ್ನು ಸೃಷ್ಟಿಸುತ್ತಿದ್ದಾರೆ. ಇದರಿಂದ ಭವಿಷ್ಯದಲ್ಲಿ ಶಾಂತಿಭಂಗ ಉಂಟಾಗಿ ಅರಾಜಕತೆ ಭುಗಿಲೇಳುವ ಸಾಧ್ಯತೆ ಇರುವದರಿಂದ ಅವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು.
>
> – **ಶಿವಪ್ರಕಾಶ ಮಹಾಜನಶೆಟ್ಟರ.**

> ನೇತೃತ್ವ ವಹಿಸಿದ್ದ ಜನಜಾಗೃತಿ ವೇದಿಕೆಯ ಉಪಾಧ್ಯಕ್ಷ ಚಂದ್ರಶೇಖರ ಹುಣಸಿಕಟ್ಟಿ ಮಾತನಾಡಿ, ಈ ಪ್ರತಿಭಟನೆಯಿಂದ ಧರ್ಮಯುದ್ಧ ಆರಂಭವಾಗಿದೆ ನಾವೆಲ್ಲರೂ ಶ್ರೀಕ್ಷೇತ್ರ ಧರ್ಮಸ್ಥಳ ಪರವಾಗಿ ನಿಲ್ಲುತ್ತೇವೆ. ಮುಂದಿನ ದಿನಗಳಲ್ಲಿ ನ್ಯಾಯಕ್ಕೆ ಜಯ ಸಿಗಲಿದೆ ಎಂದು ಹೇಳಿದರು.

## ಆ.15ರಂದು ಧ್ವಜಾರೋಹಣ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತದಿಂದ ಸ್ವಾತಂತ್ರ್ಯೋತ್ಸವ ದಿನಾಚರಣೆ ಪ್ರಯುಕ್ತ ಆಗಸ್ಟ್ 15 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ▶▶ 3ನೇ ಪುಟಕ್ಕೆ

### ಲೋಕಾಯುಕ್ತದಿಂದ ಲಕ್ಷ್ಮೇಶ್ವರ ತಾಲೂಕಿನ ಸಾರ್ವಜನಿಕರ ಕುಂದುಕೊರತೆ, ಅಹವಾಲು ಸ್ವೀಕಾರ

## ಸಾರ್ವಜನಿಕರೊಂದಿಗೆ ಅಧಿಕಾರಿಗಳು ಸೌಜನ್ಯದಿಂದ ವರ್ತಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯಾವುದೇ ಇಲಾಖೆಗೆ ಸಾರ್ವಜನಿಕರು ತಮ್ಮ ಸಮಸ್ಯೆ, ಬೇಡಿಕೆಗಳ ಬಗ್ಗೆ ಅರ್ಜಿ ಸಲ್ಲಿಸಿದಾಗ ಅವರಿಗೆ ಅರ್ಜಿ ಸ್ವೀಕೃತಿ ರಸೀದಿ ನೀಡಬೇಕು. ವೃಥಾ ಯಾರನ್ನೂ ಅಲೆದಾಡಿಸಬೇಡಿ. ಸಾರ್ವಜನಿಕರು ಸಹ ಅರ್ಜಿ ಸ್ವೀಕರಿಸಿದ ಬಗ್ಗೆ ಕಡ್ಡಾಯವಾಗಿ ಸ್ವೀಕೃತಿ ಪಡೆದುಕೊಳ್ಳುವದು ಅವಶ್ಯವಾಗಿದೆ ಎಂದು ಲೋಕಾಯುಕ್ತ ಡಿಎಸ್‌ಪಿ ವಿಜಯ ಬಿರಾದಾರ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅವರು ಪಟ್ಟಣದ ಪುರಸಭೆ ಸಭಾಭವನದಲ್ಲಿ ಬುಧವಾರ ಗದಗ ಜಿಲ್ಲೆ ಲೋಕಾಯುಕ್ತ ಇಲಾಖೆಯಿಂದ ಲಕ್ಷ್ಮೇಶ್ವರ ತಾಲೂಕಿನ ಸಾರ್ವಜನಿಕರ ಕುಂದುಕೊರತೆ ಮತ್ತು ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ದೂರು ಅರ್ಜಿಗಳು ಪರಿಶೀಲನೆ ನಡೆಸಿ, ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು.

ಇಲಾಖೆಗಳಿಗೆ ಬರುವ ಸಾರ್ವಜನಿಕರೊಂದಿಗೆ ಅಧಿಕಾರಿಗಳು, ಸಿಬ್ಬಂದಿಗಳು ಸೌಜನ್ಯಯುತವಾಗಿ ವರ್ತಿಸಬೇಕು. ನಿಗದಿತ ಅವಧಿಯಲ್ಲಿ ಅರ್ಜಿ ವಿಲೇವಾರಿಯಾಗಬೇಕು ಮತ್ತು ಶುಲ್ಕಗಳ ವಿವರಗಳ ಫಲಕ ಹಾಕಬೇಕು. ಹೆಚ್ಚುವರಿ ಹಣ ತೆಗೆದುಕೊಳ್ಳುವದರ ಬಗ್ಗೆ ದೂರು ಬಂದರೆ ಅಂಥವರ ಬಗ್ಗೆ ಕ್ರಮ ಕೈಗೊಳ್ಳಬೇಕಾಗುತ್ತದೆ. ಕಚೇರಿಗಳಲ್ಲಿ ಸಾರ್ವಜನಿಕರಿಗೆ ಕನಿಷ್ಠ ಶುದ್ಧ ಕುಡಿಯುವ ನೀರಿನ್ನು ಕಲ್ಪಿಸುವ/ ಅವರ




ಕಷ್ಟಕ್ಕೆ ಸ್ಪಂದಿಸುವ ಭಾವನೆ ಬೆಳೆಸಿಕೊಳ್ಳಿ ಎಂದರು.

ಗ್ರಾಮ ಆಡಳಿತಾಧಿಕಾರಿಗಳು/ಪಿಡಿಓಗಳು ಫೀಲ್ಡ್ ವರ್ಕ್ ಎನ್ನುತ್ತಾ ಹೊರಗೆ ಇರುತ್ತಿರುವ ಬಗ್ಗೆ ದೂರುಗಳಿದ್ದು, ಇದಕ್ಕೆ ಇಓ ಅವರು ಕ್ರಮ ವಹಿಸಲು ಸೂಚಿಸಿದರು. ಸರ್ಕಾರಿ ಆಸ್ಪತ್ರೆಗಳಲ್ಲಿ ಅಂಗವಿಕತೆ ಪ್ರಮಾಣ ಪತ್ರ ನೀಡುವ ಬಗ್ಗೆ, ರೋಗಿಗಳಿಗೆ ಶುದ್ಧ ಕುಡಿಯುವ ನೀರಿನ ಲಭ್ಯತೆ ಇಲ್ಲದಿರುವುದು, ವೈದ್ಯರು ಮತ್ತು ಸಿಬ್ಬಂದಿ ತಮ್ಮ ಸೇವಾ ಅವಧಿಯಲ್ಲಿ ಆಸ್ಪತ್ರೆಯಲ್ಲಿಯೇ ಇರಬೇಕು ಎಂಬ ದೂರುಗಳು ಕೇಳಿ ಬಂದಿವೆ. ಈ ಎಲ್ಲ ವ್ಯವಸ್ಥೆಗಳನ್ನು ಸರಿಪಡಿಸಿಕೊಳ್ಳಬೇಕು ಎಂದು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಟ್ರಾಫಿಕ್ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ಮತ್ತು ಹಾಸ್ಟೆಲ್ ವಾರ್ಡನ್‌ಗಳ ಕಾರ್ಯವೈಖರಿಯ ಬಗ್ಗೆ ದೂರುಗಳಿದ್ದು, ಸರಿಪಡಿಸಿಕೊಳ್ಳದಿದ್ದರೆ ಕ್ರಮಕ್ಕೆ ಸೂಚಿಸಲಾಗುವುದು ಎಂದರು. ಸಾರ್ವಜನಿಕರಾದ ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ ಮುಂತಾದವರು ಆಶ್ರಯ ನಿವೇಶನ ಹಂಚಿಕೆಯಲ್ಲಿ ಎಲ್ಲ ನಿಯಮಗಳನ್ನು ಗಾಳಿಗೆ ತೂರಲಾಗಿದೆ. ಪಟ್ಟಣದಲ್ಲಿ 8/10 ಕೋಟಿ ರೂ ವೆಚ್ಚದ ನಗರೋತ್ಥಾನ ಕಾಮಗಾರಿ ಮತ್ತು 140 ಕೋಟಿ ರೂ.ಗಳ ಕೆರೆ ತುಂಬಿಸುವ ಯೋಜನೆಯ ಕಾಮಗಾರಿಗಳು ಶಾಸಕರು, ಸ್ಥಳೀಯ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ನಿರ್ಲಕ್ಷ್ಯದಿಂದ ಅರ್ಧಕ್ಕೆ ನಿಂತಿವೆ. ಹೊಸ ಬಡಾವಣೆ, ಆಶ್ರಯ ನಿವೇಶನಗಳಿಗೆ ಮೂಲಭೂತ ಸೌಲಭ್ಯ ಇಲ್ಲದಿರುವದು ಸೇರಿ ಹಲವು ಸಮಸ್ಯೆಗಳ ಬಗ್ಗೆ ಪುರಸಭೆಗೆ ಮನವಿ, ಪ್ರತಿಭಟನೆ ಮಾಡಿದರೂ ಪ್ರಯೋಜನವಾಗಿಲ್ಲ ಎಂದು ದೂರಿದರು. ಗೋಸಾವಿ ಸಮಾಜದ ಸುಮಾರು 32 ಮನೆಗಳಿರುವ ಜಾಗೆಯಲ್ಲಿ ಯಾವುದೇ ಸೌಕರ್ಯಗಳಿಲ್ಲ. ಇದಕ್ಕಾಗಿ ಪುರಸಭೆಗೆ ದೂರು ಸಲ್ಲಿಸುವದು ಹಾಗೂ ಜಿಲ್ಲಾಧಿಕಾರಿಗಳ ಕಚೇರಿ ಪಾದಯಾತ್ರೆ ಮಾಡಿದರೂ ಅಧಿಕಾರಿಗಳು ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿ ದೂರು ಸಲ್ಲಿಸಿದರು.

ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಹೆಸ್ಕಾಂನ ಆಂಜನಪ್ಪ ಬಿ, ಉಪ ತಹಸೀಲ್ದಾರ ಮಂಜುನಾಥ ಅಮಾಸಿ, ಆರೋಗ್ಯ, ಆಹಾರ, ಸಾರಿಗೆ, ಕೃಷಿ, ತೋಟಗಾರಿಕೆ ಸೇರಿದಂತೆ ಎಲ್ಲ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

> ಈ ವೇಳೆ ಆಗಮಿಸಿದ್ದ ಸಾರ್ವಜನಿಕರು ಪುರಸಭೆಯವರು ಸ್ವಚ್ಛತೆಯ ಬಗ್ಗೆ ಸಂಪೂರ್ಣ ನಿರ್ಲಕ್ಷ್ಯ ತೋರುತ್ತಿದ್ದಾರೆ. ಜನರ ದೂರು/ಮನವಿಗೆ ಸ್ಪಂದಿಸುವುದಿಲ್ಲ ಎಂದಾಗ, ಪಟ್ಟಣದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಿ 15 ದಿನಗಳಲ್ಲಿ ವರದಿ ನೀಡುವಂತೆ ಮುಖ್ಯಾಧಿಕಾರಿಗಳು ಮತ್ತು ಆರೋಗ್ಯ ನಿರೀಕ್ಷಕರಿಗೆ ವಿಜಯ ಬಿರಾದಾರ ಸೂಚಿಸಿದರು.


## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು , ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರು ಆಗಸ್ಟ್ 14 ಹಾಗೂ 15 ರಂದು ಜಿಲ್ಲಾ ಪ್ರವಾಸ ಕೈಗೊಳ್ಳುತ್ತಿದ್ದು ವಿವರ ಇಂತಿದೆ.

ಆಗಸ್ಟ್14 ರಂದು ರಾತ್ರಿ 8.00 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ಹೊರಟು ರಾತ್ರಿ 9 ಗಂಟೆಗೆ ಗದುಗಿಗೆ ಆಗಮಿಸುವರು ಮತ್ತು ವಾಸ್ತವ್ಯ ಮಾಡುವರು.

ಆಗಸ್ಟ್15 ರಂದು ಬೆಳಿಗ್ಗೆ 7.45 ರಿಂದ 8.00 ಗಂಟೆಗೆ ಗದಗ ಇಂಡಸ್ಟ್ರಿಯಲ್ ಎಸ್ಟೇಟ್‌ದಲ್ಲಿ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 8.30 ಗಂಟೆಯಿಂದ 8.45 ವರೆಗೆ ಕಾಂಗ್ರೆಸ್ ಕಚೇರಿಯಲ್ಲಿ ಧ್ವಜಾರೋಹಣ ಕಾರ್ಯಕ್ರಮ ನೆರವೇರಿಸುವರು. ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ



ಧ್ವಜಾರೋಹಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ನಂತರ ಬೆಳಿಗ್ಗೆ 10 ಗಂಟೆಗೆ ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮದ ಉದ್ಘಾಟನೆ ಮಾಡುವರು. ಬೆಳಿಗ್ಗೆ 10.30 ಗಂಟೆಗೆ ಪತ್ರಿಕಾಗೋಷ್ಠಿ ನಡೆಸುವರು. ಬೆಳಿಗ್ಗೆ 11 ಗಂಟೆಗೆ ನಗರದ ಭೂಮರೆಡ್ಡಿ ಸರ್ಕಲ್ ಹತ್ತಿರ ಕರ್ನಾಟಕ ದಲಿತ ಸಂಘರ್ಷ ಸಮಿತಿ ( ರಿ) ಗದಗ ಇವರಿಂದ ಆಟೋ ರಿಕ್ಷಾ ಚಾಲಕರಿಗೆ ಪ್ರಶಸ್ತಿ ಮತ್ತು ಸಮವಸ್ತ್ರ ವಿತರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 11.30 ಗಂಟೆಗೆ ನಗರದ ಶ್ರೀ ವೀರನಾರಾಯಣ ದೇವಸ್ಥಾನಕ್ಕೆ ಭೇಟಿ ನೀಡುವರು. ಬೆಳಿಗ್ಗೆ 12 ಗಂಟೆಗೆ ಪಂಡಿತ ಪುಟ್ಟರಾಜ ಬಸ್ ನಿಲ್ದಾಣದಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟನೆ ಕಾರ್ಯಕ್ರಮ, ಮಧ್ಯಾಹ್ನ 12.15 ಗಂಟೆಗೆ ಬೆಟಗೇರಿಯ ನರಸಾಪುರ ಹತ್ತಿರದ ಮಂಜುನಾಥ ಬುದ್ಧಿಮಾಂದ್ಯ ಶಿಕ್ಷಣ ಸಂಸ್ಥೆಗೆ ಭೇಟಿ ನೀಡುವರು.

ಅದೇ ದಿನ ಮಧ್ಯಾಹ್ನ 12.45 ಗಂಟೆಗೆ ನಗರದ ಗಾಂಧಿ ಸರ್ಕಲ್ ಹತ್ತಿರದಲ್ಲಿನ ಅನ್ನಪೂರ್ಣೇಶ್ವರಿ ಪ್ರಸಾದ ಕೇಂದ್ರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1 ಗಂಟೆಗೆ ಗದಗ ಇಂಡಸ್ಟ್ರಿಯಲ್ ಎಸ್ಟೇಟ್‌ದಲ್ಲಿ ರಕ್ತದಾನ ಶಿಬಿರದಲ್ಲಿ ಭಾಗಿಯಾಗುವರು. ಮಧ್ಯಾಹ್ನ 1.30 ಗಂಟೆಗೆ ಶ್ರೀಸಿದ್ಧರಾಮೇಶ್ವರ ನಗರದ ಡಂಬಳ ನಾಕಾದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಸಂಜೆ 4.00 ರಿಂದ ಸಂಜೆ 5.30 ರವರೆಗೆ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಸೇವಾ ತಂಡದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಸಂಜೆ 5.45 ಕ್ಕೆ ನಗರದ ಕೆ.ಎಚ್.ಪಾಟೀಲ ಸಭಾಭವನದಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ▶▶ 3ನೇ ಪುಟಕ್ಕೆ

### ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಆಗಸ್ಟ್ 15ರಂದು ಸ್ವಾತಂತ್ರ್ಯೋತ್ಸವ ಕಾರ್ಯಕ್ರಮ

## ‘ಸಂವಿಧಾನ ರಕ್ಷಿಸಿ ಪ್ರಜಾಪ್ರಭುತ್ವ ಉಳಿಸಿ’

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ರಾಷ್ಟ್ರಧ್ವಜಾರೋಹಣ ಹಾಗೂ ‘ಸಂವಿಧಾನ ರಕ್ಷಿಸಿ ಪ್ರಜಾಪ್ರಭುತ್ವ ಉಳಿಸಿ’ ಕಾರ್ಯಕ್ರಮ ಆ. 15ರಂದು ಬೆಳಿಗ್ಗೆ 9ಕ್ಕೆ ಜರುಗಲಿದೆ.

ಅಂದು ಕಾಂಗ್ರೆಸ್‌ನ ಎಲ್ಲ ಮುಖಂಡರು ರಾಷ್ಟ್ರ ಧ್ವಜಗಳನ್ನು ಹಿಡಿದು ಸ್ವಾತಂತ್ರ್ಯ ಸ್ಮಾರಕಗಳವರೆಗೆ ‘ಸಂವಿಧಾನ ರಕ್ಷಿಸಿ ಪ್ರಜಾಪ್ರಭುತ್ವ ಉಳಿಸಿ’ ಎಂಬ ಘೋಷವಾಕ್ಯಗಳೊಂದಿಗೆ ಪಥಸಂಚಲನ ನಡೆಸಲಾಗುವುದು. ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರುಗಳು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು, ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು, ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲೀಗಲ್ ರಿಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ವಿಭಾಗಗಳ ಅಧ್ಯಕ್ಷರು, ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ವಿನಂತಿಸಿದ್ದಾರೆ.

> ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆ ವಹಿಸುವರು. ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ ಪಾಲ್ಗೊಳ್ಳುವರು.

## ಸಂಪಾದಕೀಯ

# ರಾಜ್ಯದಲ್ಲಿ ಕಡಿಮೆ ಆಗದ ರಸ್ತೆ ಅಪಘಾತಗಳು

ರಸ್ತೆ ಅಪಘಾತಗಳು ದೇಶದಲ್ಲಿ ಒಂದು ದೊಡ್ಡ ಸಮಸ್ಯೆಯಾಗಿದ್ದು, ಇದರ ತಡೆಗಟ್ಟುವಿಕೆ ಸವಾಲಾಗಿದೆ. ಇತ್ತೀಚಿನ ವರದಿಗಳ ಪ್ರಕಾರ, ದೇಶದಲ್ಲಿ ಪ್ರತೀ ವರ್ಷ 1,25,000 ಜನರು ರಸ್ತೆ ಅಪಘಾತಗಳಲ್ಲಿ ಸಾಯುತ್ತಿದ್ದಾರೆ, ಅದರಲ್ಲಿ 8,000 ಜನರು ನಮ್ಮ ಕರ್ನಾಟಕ ರಾಜ್ಯದವರು.

ಕಠಿಣ ದಂಡ, ಪರವಾನಗಿ ರದ್ದು ಮತ್ತು ಕಾನೂನು ಕ್ರಮಗಳಂತಹ ಹಲವು ಕ್ರಮಗಳ ಹೊರತಾಗಿಯೂ, ಈ ಸಂಖ್ಯೆ ಕಡಿಮೆಯಾಗುತ್ತಿಲ್ಲ. ಈ ಬಗ್ಗೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿಯೂ ಸದನದಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ, ಅಸಹಾಯಕತೆಯನ್ನೂ ವ್ಯಕ್ತಪಡಿಸಿದ್ದಾರೆ.

ಅಪಘಾತಗಳು ಕಡಿಮೆಯಾಗದಿರಲು ಮುಖ್ಯ ಕಾರಣ ಜನರಲ್ಲಿ ಜಾಗೃತಿ ಇಲ್ಲದಿರುವುದು. ಕುಡಿದು ವಾಹನ ಚಾಲನೆ ಮಾಡುವುದು, ನಿರ್ಲಕ್ಷ್ಯದಿಂದ ವೀಲಿಂಗ್ ಮಾಡುವುದು, ಮತ್ತು ಸಂಚಾರ ನಿಯಮಗಳನ್ನು ಉಲ್ಲಂಘಿಸುವುದು ಸಾಮಾನ್ಯವಾಗಿದೆ.

ಸರ್ಕಾರವು ಶಾಲಾ-ಕಾಲೇಜುಗಳಲ್ಲಿ ಜಾಗೃತಿ ಅಭಿಯಾನಗಳನ್ನು ನಡೆಸುತ್ತಿದ್ದರೂ, ಇದು ಅಷ್ಟಾಗಿ ಪರಿಣಾಮಕಾರಿಯಾಗಿಲ್ಲ. ಕಾನೂನುಗಳು ಎಷ್ಟೇ ಕಠಿಣವಾಗಿದ್ದರೂ, ಅವುಗಳನ್ನು ಪಾಲಿಸಬೇಕಾದದ್ದು ಜನರ ಜವಾಬ್ದಾರಿ.

ರಾಜ್ಯದಲ್ಲಿ ಲಕ್ಷಾಂತರ ದ್ವಿಚಕ್ರ ಮತ್ತು ಮೋಟಾರ್ ವಾಹನಗಳಿದ್ದರೂ, ಸುರಕ್ಷತಾ ನಿಯಮಗಳ ಬಗ್ಗೆ ಎಲ್ಲರಿಗೂ ತಿಳಿದಿಲ್ಲ. ಪ್ರತಿಯೊಬ್ಬ ನಾಗರಿಕನು ರಸ್ತೆ ಸುರಕ್ಷತೆಯ ಕುರಿತು ಜವಾಬ್ದಾರಿಯುತವಾಗಿ ವರ್ತಿಸಿದರೆ ಮಾತ್ರ ಈ ದುರಂತಗಳನ್ನು ತಡೆಯಲು ಸಾಧ್ಯ.

ಸರ್ಕಾರದ ಪ್ರಯತ್ನಗಳಿಗೆ ನಮ್ಮ ಬೆಂಬಲವೂ ಬೇಕು. ಎಲ್ಲರೂ ಕಾನೂನು ಪಾಲಿಸಿದರೆ, ರಸ್ತೆಗಳು ಸುರಕ್ಷಿತವಾಗುತ್ತವೆ, ಮತ್ತು ಅಮೂಲ್ಯ ಜೀವಗಳು ಉಳಿಯುತ್ತವೆ.

ನಮ್ಮ ರಾಜ್ಯದ ಸಾರಿಗೆ ಇಲಾಖೆಯು ಪರಿಸರ ಸ್ನೇಹಿ ಎಲೆಕ್ಟ್ರಿಕ್ ಬಸ್‌ಗಳನ್ನು ಪರಿಚಯಿಸಲು ಮುಂದಾಗಿದೆ.

175 ಹೊಸ ಎಲೆಕ್ಟ್ರಿಕ್ ಬಸ್‌ಗಳು ಕೆಎಸ್‌ಆರ್‌ಟಿಸಿ ಮತ್ತು ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಗಳ ಭಾಗವಾಗಿ ಸೇರ್ಪಡೆಯಾಗಲಿವೆ.

ಇದು ಪರಿಸರಕ್ಕೆ ಉತ್ತಮ ಕ್ರಮವಾಗಿದ್ದರೂ, ರಸ್ತೆ ಸುರಕ್ಷತೆಯ ಬಗ್ಗೆ ಗಮನ ಹರಿಸಬೇಕಾದದ್ದು ಹೆಚ್ಚು ಮುಖ್ಯವಾಗಿದೆ. ಪ್ರತಿಯೊಬ್ಬರೂ ಜವಾಬ್ದಾರಿಯುತವಾಗಿ ನಡೆದುಕೊಂಡರೆ ಮಾತ್ರ ರಸ್ತೆ ಅಪಘಾತಗಳು ಕಡಿಮೆಯಾಗಲು ಸಾಧ್ಯ.

### ಹೆಚ್ಚಿದ ಮಳೆ | ಬೆಳೆಯೆಲ್ಲ ನೀರು ಪಾಲು | ತಪ್ಪದ ರೈತರ ಗೋಳು

# ರೈತರ ನಿರೀಕ್ಷೆ ನುಚ್ಚು ನೂರು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ 8-10 ದಿನಗಳಿಂದ ಸುರಿತ್ತಿರುವ ಮಳೆಯಿಂದ ತಾಲೂಕಿನಾದ್ಯಂತ ನೂರಾರು ಎಕರೆ ಬೆಳೆ ಹಾನಿಗೀಡಾಗುತ್ತಿದ್ದು, ರೈತ ಸಮುದಾಯದ ಈ ವರ್ಷದ ಆಸೆ-ನಿರೀಕ್ಷೆಯೂ ನುಚ್ಚುನೂರಾಗಿ ಸಂಕಷ್ಟಕ್ಕೊಳಗಾಗಿದ್ದಾರೆ.

ಸಕಾಲಿಕ ಮಳೆಯಿಂದ ಈ ವರ್ಷ ಮುಂಗಾರಿನ ಬೆಳೆಗಳು ಸಮೃದ್ಧವಾಗಿಯೇ ಬೆಳೆದಿದ್ದವು. ಬೆಳೆ ಕಂಡು ಅಪಾರ ಆಸೆ-ಕನಸು ಹೊತ್ತು ಹೆಚ್ಚು ಖರ್ಚು ಮಾಡಿ ಕೀಟ, ರೋಗಬಾಧೆ ನಿಯಂತ್ರಿಸುತ್ತ, ಸಂರಕ್ಷಣೆ ಮಾಡುತ್ತಾ ಬೆರಗುಗಣ್ಣಿನಿಂದ ಕಾಯುತ್ತಿದ್ದ ರೈತರ ಬೆನ್ನುಮೂಳೆ ಮುರಿದಂತಾಗಿದೆ. ಸತತ ಮಳೆಯಿಂದಾಗಿ ಲಕ್ಷ್ಮೇಶ್ವರ ಸೇರಿ ತಾಲೂಕಿನ ಅಡರಕಟ್ಟಿ, ಹರದಗಟ್ಟಿ, ಆದ್ರಳ್ಳಿ, ಗೊಜನೂರ, ಯಳವತ್ತಿ, ಮಾಡಳ್ಳಿ, ಯತ್ನಳ್ಳಿ, ರಾಮಗೇರಿ, ಬಸಾಪುರ, ಬಾಲೆಹೊಸೂರ, ಸೂರಣಗಿ, ಹುಲ್ಲೂರ, ಶಿಗ್ಲಿ, ದೊಡ್ಡೂರ ಸೇರಿ ಬಹುತೇಕ ಕಡೆ ಜಮೀನುಗಳಲ್ಲಿ ಅಪಾರ ಪ್ರಮಾಣದ ನೀರು ನಿಂತು ಬೆಳೆಗಳು ಹಾಳಾಗಿವೆ.

ಕಟಾವಿನ ಹಂತ ತಲುಪಿರುವ ಹೆಸರು ಬೆಳೆಯೊಂದಿಗೆ ಸಮೃದ್ಧವಾಗಿ ಬೆಳೆದ ಗೋವಿನಜೋಳ, ಬಿಟಿ ಹತ್ತಿ, ಶೇಂಗಾ, ಮೆಣಸಿನಕಾಯಿ, ಉಳ್ಳಾಗಡ್ಡಿ ಸೇರಿ ಬಹುತೇಕ ಬೆಳೆಗಳು ಅತಿಯಾದ ಮಳೆಯಿಂದ ಹಾನಿಗೀಡಾಗಿ ರೈತರು ಮತ್ತೆ ಆರ್ಥಿಕ ಸಂಕಷ್ಟಕ್ಕೊಳಗಾಗಿದ್ದಾರೆ. ತಾಲೂಕಿನಲ್ಲಿ 2600 ಹೆಕ್ಟೇರ್ ನೀರಾವರಿ ಮತ್ತು 29300 ಹೆಕ್ಟೇರ್ ಖುಷ್ಕಿ ಜಮೀನು ಸೇರಿ ಒಟ್ಟು 31900 ಹೆಕ್ಟೇರ್ ಪ್ರದೇಶದಲ್ಲಿ ಮುಂಗಾರಿನ ಬಿತ್ತನೆಯಾಗಿದೆ. ಅದರಲ್ಲಿ ಮುಖ್ಯವಾಗಿ 12000 ಹೆಕ್ಟೇರ್ ಮೆಕ್ಕೆಜೋಳ, 6000 ಹೆಕ್ಟೇರ್ ಕ್ಷೇತ್ರದಲ್ಲಿ ಹೆಸರು ಬಿತ್ತನೆ ಮಾಡಲಾಗಿದೆ.

ಜಿಟಿಜಿಟಿ ಮಳೆ, ಮೋಡ ಕವಿದ ವಾತಾವರಣದಿಂದ ಹೆಸರು ಬೆಳೆ ಇಳುವರಿ ಕುಂಠಿತವಾಗಿದೆ. ಖರ್ಚು ಮಾಡಿದಷ್ಟಾದರೂ ಬೆಳೆ ಬಂದರೆ ಸಾಕು ಎಂದಿದ್ದರು. ಆದರೆ ಇದೀಗ ಹೆಸರು ಬೆಳೆ ಕಟಾವಿಗೆ ಮಳೆ ಅಡ್ಡಿಯಾಗಿದ್ದು, ಮಮ್ಮಲ ಮರಗುತ್ತಿದ್ದಾರೆ. ಈ ವರ್ಷ ಸರ್ಕಾರ ಪ್ರತಿ ಕ್ವಿಂಟಲ್ ಹೆಸರಿಗೆ 8768 ರೂ ಬೆಂಬಲ ಬೆಲೆ ಘೋಷಣೆ ಮಾಡಿದ್ದಲ್ಲದೇ ಮಾರುಕಟ್ಟೆಯಲ್ಲಿ ಉತ್ತಮ ಬೆಲೆಯೂ ಇತ್ತು. ಆದರೆ, ಬೆಳೆಯನ್ನೆಲ್ಲ ಮಳೆ ನುಂಗಿದೆ.

ಹೆಸರಷ್ಟೇ ಅಲ್ಲದೆ ಶೇಂಗಾ, ಹತ್ತಿ, ಉದ್ದು, ಸೋಯಾಬಿನ್, ಉಳ್ಳಾಗಡ್ಡಿ, ಮೆಣಸಿನ ಬೆಳೆಗಳೂ ಹಾಳಾಗಿ, ಜಮೀನು ಜವುಳಾಗಿ ಸಂಪೂರ್ಣ ಮುಂಗಾರೇ ಕೈಕೊಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಬಿತ್ತನೆ ಸಂದರ್ಭದಲ್ಲಿ ರೈತರು ಜಮೀನು ಹದಗೊಳಿಸುವುದು, ಬೀಜ, ಗೊಬ್ಬರ, ಕ್ರಿಮಿನಾಶಕ, ಆಳಿನ ಖರ್ಚು ಸೇರಿ ಪ್ರತಿ ಎಕರೆಗೆ 20/30 ಸಾವಿರಕ್ಕೂ ಹೆಚ್ಚು ಖರ್ಚು ಮಾಡಿದ್ದಾರೆ. ಆದರೀಗ ಉತ್ತಮ ಮಳೆಗಾಲದ ಭವಿಷ್ಯದಿಂದ ಸಂತಸದಲ್ಲಿದ್ದ ರೈತರಿಗೆ ಗಾಯದ ಮೇಲೆ ಬರೆ ಎಳೆದಂತಾಗಿದೆ.

'ಹೋದ ವರ್ಷ ಸಕಾಲಕ್ಕೆ ಮಳೀ ಇಲ್ದ ಬೆಳೀ ಹಾಳಾತು. ಈ ವರ್ಷ ಮಳೀ ಹೆಚ್ಚಾಗಿ ಬೆಳಿ ಹಾಳಾತು. ಹಿಂಗಾದ್ರ ರೈತರು ಹೆಂಗ ಬದಕಬೇಕ್ರೀ. ಸ್ವಂತ ಹೊಲ ಅಲ್ದ ಈ ವರ್ಷ ಹೆಚ್ಚಿನ ಹಣಕ್ಕೆ ಲಾವಣಿ, ಬಡ್ಡಿ ಹಂಗ ಹೊಲ ಮಾಡಿದ್ವಿ. ಹೊಲಾ ಹಸನ ಮಾಡೋದ್ರಿಂದ ಹಿಡಿದು ಇಲ್ಲಿತನಕ ಲಕ್ಷಾಂತರ ರೂ ಖರ್ಚು ಮಾಡೇವಿ. ಈಗ ಮಳೀ ಬಂದು ಕೈಗೆ ಬಂದ ಹೆಸರು, ಉಳ್ಳಾಗಡ್ಡಿ ಬೆಳ್ಯಾಗ ನೀರ ನಿಂತು ಹಾಳಾಗೇವು. ಬ್ಯಾಂಕಿನ ಸಾಲ, ಕೈಗಡ ಸಾಲ ಬೆಳ್ಯಾಕಂತಾವ. ಮಕ್ಕಳ ಸಾಲಿ ಕಲಸೋದ ಹೆಂಗ, ಬದುಕು ನಡಸೋದ ಹೆಂಗ' ಎಂದು ಅಡರಕಟ್ಟಿ ಗ್ರಾಮದ ರೈತರಾದ ಯಲ್ಲಪ್ಪ ಹವಳದ, ಈರಪ್ಪ ಭಂಗಿ, ಶಿವಪ್ಪ ಹವಳದ, ಸಿದ್ದು ಹವಳದ, ರಾಮಣ್ಣ ಚಿಕ್ಕಣ್ಣವರ, ಬಸವರಾಜ ಮಂಟೂರ, ಈಶ್ವರಪ್ಪ ಭಂಗಿ ಅನೇಕರು ತಮ್ಮ ಅಳಲು ತೋಡಿಕೊಂಡರು.

> ಬೆಳೆಗಳಲ್ಲಿ ನೀರು ನಿಲ್ಲುವುದು, ತೇವಾಂಶ ಹೆಚ್ಚಳವಾಗಿ ಕೊಳೆರೋಗದಿಂದ ಬೆಳೆ ಸಂಪೂರ್ಣ ಕುಂಠಿತವಾಗಿದೆ. ಮಳೆ ಬಿಡುವು ಕೊಡದ್ದರಿಂದ ಹಾಳಾದ ಬೆಳೆ ಸುಧಾರಿಸುವುದು ಕಷ್ಟಸಾಧ್ಯ. ಕಳೆದ ಒಂದು ವಾರದಿಂದ ಮಳೆಯ ಪ್ರಮಾಣ ಹೆಚ್ಚಿ ಬೆಳೆ ಹಾಳಾಗುತ್ತಿರುವ ಬಗ್ಗೆ ಪರಿಶೀಲಿಸಿ ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಲಾಗುತ್ತಿದೆ.
>
> – **ಚಂದ್ರಶೇಖರ ನರಸಮ್ಮನವರ.** ಸಹಾಯಕ ಕೃಷಿ ಅಧಿಕಾರಿಗಳು.



# ದರಪಟ್ಟಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆಡಳಿತ ಭವನದಲ್ಲಿನ ಕೊಠಡಿ ಸಂಖ್ಯೆ 122, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯ ಉಪಯೋಗಕ್ಕಾಗಿ ಅಕ್ಟೋಬರ್-2025 ರಿಂದ ಒಂದು ವರ್ಷದ ಅವಧಿಗೆ ಹವಾ ನಿಯಂತ್ರಿತ ಬಾಡಿಗೆ ವಾಹನ ಪೂರೈಕೆಗಾಗಿ ಕನಿಷ್ಠ ದರಪಟ್ಟಿಗಳನ್ನು ಅರ್ಹ ನೋಂದಾಯಿತ ಟ್ರಾವೆಲ್ ಏಜೆನ್ಸಿ ಸಂಸ್ಥೆಗಳಿಂದ ಆಹ್ವಾನಿಸಲಾಗಿದೆ. ದರಪಟ್ಟಿಗಳನ್ನು ಸೆಪ್ಟೆಂಬರ್ 4 ಮಧ್ಯಾಹ್ನ 3 ಗಂಟೆಯೊಳಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ವಿವರಗಳಿಗಾಗಿ ಗದಗ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿ, ಜಿಲ್ಲಾ ಆಡಳಿತ ಭವನ, ಗದಗ ದೂರವಾಣಿ ಸಂಖ್ಯೆ 08372-220344 ಸಂಪರ್ಕಿಸಬಹುದಾಗಿದೆ.

# ಎಮ್ಮೆ ಕಳ್ಳರ ಬಂಧನ




■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ಹಲುವಾಗಲು ಠಾಣಾ ವ್ಯಾಪ್ತಿಯ ತುಂಬಿಗೆರೆ ಗ್ರಾಮದ ಕನ್ನಪ್ಪನವರ ನೀಲಪ್ಪನವರಿಗೆ ಸೇರಿದ ಎಮ್ಮೆ ಕಳ್ಳತನವಾದ ಬಗ್ಗೆ ದೂರು ದಾಖಲಾಗಿತ್ತು. ಪ್ರಕರಣಕ್ಕೆ ಸಂಬಂಧಿಸಿ ಹರಪನಹಳ್ಳಿ ಡಿವೈಎಸ್ಪಿ ವೆಂಕಟಪ್ಪ ನಾಯಕರ ಆದೇಶದಂತೆ ಸಿಪಿಐ ಮಹಂತೇಶ್ ಸಜ್ಜನ್ ಮತ್ತು ಹಲುವಾಗಲು ಪಿಎಸ್‌ಐ ಕಿರಣ್ ಕುಮಾರ್ ಎ ತಂಡದೊಂದಿಗೆ ಆರೋಪಿತರನ್ನು ಬಂಧಿಸುವಲ್ಲಿ ಬುಧವಾರ ಯಶಸ್ವಿಯಾಗಿದ್ದಾರೆ.

ಆರೋಪಿಗಳಾದ ಹೆಚ್.ಆರ್. ಅಭಿಷೇಕ್ ಹರಿಹರ ತಾಲೂಕು, ದುಗ್ಗಾವತಿ ಗ್ರಾಮದವರಾದ ಎಸ್.ವಿ. ರಮೇಶ್, ಕೆ. ಕೆಂಚಪ್ಪ, ಹಾಲೇಶ್ ಬಿ, ಚಂದು ಸಿ ಇವರಿಂದ ಪೊಲೀಸರು 55 ಸಾವಿರ ಬೆಲೆಯ ಎಮ್ಮೆ, ಕಳ್ಳತನಕ್ಕೆ ಬಳಸಿದ್ದ ಟಾಟಾ ಎಸಿ ಗೂಡ್ಸ್ ವಾಹನ, ಮತ್ತು ಎರಡು ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಿಕೊಂಡಿದ್ದಾರೆ. ಪತ್ತೆ ಕಾರ್ಯ ಕೈಗೊಂಡ ಪೊಲೀಸ್ ಸಿಬ್ಬಂದಿ ವರ್ಗಕ್ಕೆ ವಿಜಯನಗರ ಜಿಲ್ಲಾ ಹೆಚ್ಚುವರಿ ಎಸ್ಪಿ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

### ಅರ್ಥಶಾಸ್ತ್ರ ಉಪನ್ಯಾಸಕರಿಗೆ ಪುನಶ್ಚೇತನ ತರಬೇತಿ ಕಾರ್ಯಾಗಾರ

# ವಿದ್ಯಾರ್ಥಿಗಳ ಅಭಿವೃದ್ಧಿಗೆ ಕಾರ್ಯಾಗಾರ ಪೂರಕ




■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳ ಬುದ್ಧಿಮಟ್ಟ ಅರಿತು ಸೂಕ್ತ ಮಾರ್ಗದರ್ಶನ ನೀಡಿದಾಗ ಫಲಿತಾಂಶ ಸುಧಾರಣೆ ಮಾಡಲು ಸಾಧ್ಯ ಎಂದು ಪ.ಪೂ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿದ್ದಲಿಂಗ ಬಂಡು ಮಸನಾಯಕ್ ಹೇಳಿದರು.

ಅವರು ಮಂಗಳವಾರ ನಗರದ ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ಆರ್ಥಿಕ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ, ಉಪನಿರ್ದೇಶಕರ ಕಚೇರಿ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಅರ್ಥಶಾಸ್ತ್ರ ವಿಷಯದ ಉಪನ್ಯಾಸಕರಿಗೆ ಆಯೋಜಿಸಿದ್ದ ಒಂದು ದಿನದ ಪುನಶ್ಚೇತನ ತರಬೇತಿ ಕಾರ್ಯಾಗಾರ ಹಾಗೂ ಸಾಧಕರಿಗೆ ಮತ್ತು ನಿವೃತ್ತರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಇಂತಹ ಕಾರ್ಯಾಗಾರ ಅವಶ್ಯವಾಗಿದೆ. ಕಾರ್ಯಾಗಾರದ ಮೂಲಕ ನ್ಯೂನ್ಯತೆಗಳನ್ನು ಪತ್ತೆ ಹಚ್ಚಿ, ಅವುಗಳನ್ನು ನಿವಾರಣೆ ಮಾಡಿ, ಗುರಿ ಸಾಧಿಸಲು ಹಿರಿಯ ಉಪನ್ಯಾಸಕರ ಸಲಹೆ-ಸೂಚನೆಗಳನ್ನು ಪಾಲಿಸಬೇಕು. ಅಂದಾಗ ಫಲಿತಾಂಶ ಸುಧಾರಣೆ ಮಾಡಲು ಸಹಾಯಕವಾಗುತ್ತದೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಕಾರ್ಯಾಧ್ಯಕ್ಷ ವ್ಹಿ.ಎಸ್. ದಲಾಲಿ, ಫಲಿತಾಂಶ ಸುಧಾರಣೆಗಾಗಿ ಪ್ರತಿವರ್ಷ ಇಂತಹ ಕಾರ್ಯಗಳನ್ನು ಹಮ್ಮಿಕೊಂಡು, ಸತತ ಪ್ರಯತ್ನದೊಂದಿಗೆ ಸುಧಾರಣೆ ಮಾಡಲಾಗುತ್ತಿದೆ. ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು.

ಹಿರಿಯ ಉಪನ್ಯಾಸಕ ಎನ್.ಜಿ. ಇಬ್ರಾಹಿಂಕಲೀಲುಲ್ಲಾ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದರು.

ಅರ್ಥಶಾಸ್ತ್ರ ವಿಷಯದಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ, ಸಾಧಕರಿಗೆ ಹಾಗೂ ನಿವೃತ್ತರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಮುಖ್ಯ ಅತಿಥಿಗಳಾಗಿ ಎಚ್.ಎಸ್. ಕಿಂದ್ರಿ, ವಾಯ್.ಸಿ. ಪಾಟೀಲ, ಪ್ರಾ. ಎಮ್.ಸಿ. ಕಟ್ಟಿಮನಿ, ಪ್ರಾ. ಎಸ್.ಎಸ್. ಸೋಮಣ್ಣವರ, ಬಿ.ಎಸ್. ಮಲ್ಲಾಪೂರ ಸೇರಿದಂತೆ ಪ.ಪೂ ಕಾಲೇಜಗಳ ಪ್ರಾಚಾರ್ಯರ ಸಂಘದ ಹಾಗೂ ಪ.ಪೂ ಕಾಲೇಜುಗಳ ಉಪನ್ಯಾಸಕರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

> ಆರ್ಥಿಕ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ಅಧ್ಯಕ್ಷ ಎಸ್.ಎಸ್. ಪಟ್ಟಣಶೆಟ್ಟಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಂಘದ ಆರಂಭ ಪೂರ್ವದ ಫಲಿತಾಂಶ, ಸಂಘದ ಕಾರ್ಯಚಟುವಟಿಕೆಗಳಿಂದಾಗಿ ಫಲಿತಾಂಶ ಸುಧಾರಣೆಯಾಗಿದೆ. ಅರ್ಥಚೇತನ ಪುಸ್ತಕದಿಂದ ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ. ದೇಶದ ಆರ್ಥಿಕತೆ ಹೆಚ್ಚಿಸಲು ಸಾಕಷ್ಟು ಅಧ್ಯಯನ ಮಾಡಿ, ಆರ್ಥಿಕ ಲೇಖನಗಳನ್ನು ಬರೆಯುವ ಜೊತೆಗೆ ಸಾಮಾಜಿಕ ಜಾಲತಾಣಗಳಲ್ಲಿ ಆರ್ಥಿಕ ವಿಚಾರಗಳನ್ನು ಹಂಚಿಕೊಳ್ಳಬೇಕೆಂದು ಹೇಳಿದರು.

# ಡಿ.ದೇವರಾಜ ಅರಸು ಜನ್ಮ ದಿನಾಚರಣೆ: ಪ್ರಬಂಧ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾಜಿಕ ಕ್ರಾಂತಿಯ ಹರಿಕಾರ, ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಡಿ. ದೇವರಾಜ ಅರಸುರವರ 110 ನೇ ಜನ್ಮದಿನಾಚರಣೆಯ ಪ್ರಯುಕ್ತ ಸಾರ್ವಜನಿಕರಿಗೆ ಡಿ.ದೇವರಾಜ ಅರಸುರವರು ಶೋಷಿತ ವರ್ಗಕ್ಕೆ ಹಾಗೂ ಹಿಂದುಳಿದ ವರ್ಗಕ್ಕೆ ನೀಡಿರುವ ಕೊಡುಗೆಗಳ ಕುರಿತು ಪ್ರಬಂಧ ಸ್ಪರ್ಧೆ ಏರ್ಪಡಿಸಲಾಗಿದೆ.

ಆಸಕ್ತರು ಆಗಸ್ಟ್ 18 ರಂದು ಮಧ್ಯಾಹ್ನ 12 ಗಂಟೆಯೊಳಗೆ ಪ್ರಬಂಧವನ್ನು 500 ಪದಗಳಿಗೆ ಮೀರದಂತೆ ಬರೆದು ಪಿಡಿಎಫ್ ಕಾಪಿಯನ್ನು dobcmgadag@gmail.com ಗೆ ಕಳುಹಿಸಲು ತಿಳಿಸಲಾಗಿದೆ. ವಿಜೇತರಿಗೆ ಪ್ರಥಮ ಮತ್ತು ದ್ವಿತೀಯ ಬಹುಮಾನಗಳನ್ನು ನೀಡಲಾಗುವುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದುಳಿದ ವರ್ಗಗಳ ಪತ್ರಕರ್ತರಿಗೆ ಮೀಡಿಯಾ ಕಿಟ್‌ಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಪತ್ರಿಕೋದ್ಯಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಸಮುದಾಯಕ್ಕೆ ಸೇರಿರುವ ಪತ್ರಕರ್ತರನ್ನು ಪ್ರೋತ್ಸಾಹಿಸುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ 2025-26ನೇ ಸಾಲಿಗೆ ಮಾಧ್ಯಮ ಮಾನ್ಯತೆ ಹೊಂದಿರುವ ಪತ್ರಕರ್ತರಿಗೆ "ಮೀಡಿಯಾ ಕಿಟ್" ವಿತರಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಹಿಂದುಳಿದ ವರ್ಗಗಳ ಮಾನ್ಯತೆ ಪಡೆದ ಪತ್ರಕರ್ತರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅಥವಾ ಅಯಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಗಳಿಂದ ಅರ್ಜಿ ನಮೂನೆಯನ್ನು ಪಡೆದುಕೊಳ್ಳುವುದು. ಇಲಾಖೆಯ ಮಾನ್ಯತಾ ಕಾರ್ಡ್ (Accriditation Card) ಹೊಂದಿದ ಪತ್ರಕರ್ತರು ತಮ್ಮ ಹೆಸರು, ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ (ಉಪಜಾತಿ), ಪತ್ರಿಕಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸೇವಾನುಭವ, ವೇತನ ವಿವರಗಳನ್ನೊಳಗೊಂಡ ಮಾಹಿತಿಯನ್ನು ಭರ್ತಿ ಮಾಡಿ ಸ್ವ-ವಿಳಾಸವಿರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸುವುದು.

ಅರ್ಜಿ ಸಲ್ಲಿಸಬಯಸುವವರು ಅರ್ಜಿಯೊಂದಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ 2025-26ನೇ ಸಾಲಿನಲ್ಲಿ ವಿತರಿಸಲಾಗಿರುವ ಮಾಧ್ಯಮ ಮಾನ್ಯತಾ ಕಾರ್ಡ್ ಹೊಂದಿರುವ ಬಗ್ಗೆ ದೃಢೀಕೃತ ಜೆರಾಕ್ಸ್ ಪ್ರತಿ, ಜಾತಿ ದೃಢೀಕರಣಕ್ಕಾಗಿ ಚಾಲ್ತಿಯಲ್ಲಿರುವ ಜಾತಿ ಪ್ರಮಾಣ ಪತ್ರದ ದೃಢೀಕೃತ ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಲಗತ್ತಿಸಬೇಕು. ಹಾಗೂ ಅರ್ಜಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಮಾಹಿತಿಗಳಿಗೆ ಅಧಿಕೃತ ಪೂರಕ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಲಗತ್ತಿಸಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕದೊಳಗಾಗಿ ಸಲ್ಲಿಸಬೇಕು. ನಿಗದಿತ ದಿನಾಂಕದ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರ್ಕಾರದ ವ್ಯಾಪ್ತಿಗೆ ಒಳಪಡುವ ನಿಗಮ, ಮಂಡಳಿಗಳಿಂದ ಹಾಗೂ ಸರ್ಕಾರದ ಯಾವುದೇ ಇಲಾಖೆಗಳಿಂದ ಈ ಯೋಜನೆಯಡಿ ಮಾಧ್ಯಮ ಕಿಟ್‌ಗಳನ್ನು ಪಡೆದಿರುವುದಿಲ್ಲ ಎಂದು ರೂ. 200 ರ ಬಾಂಡ್‌ನಲ್ಲಿ ಮುಚ್ಚಳಿಕೆ ಪತ್ರವನ್ನು ಸಲ್ಲಿಸಬೇಕು. ಮಾಧ್ಯಮ ಕಿಟ್ ಒದಗಿಸಲು ಪತ್ರಕರ್ತರ ಸೇವಾ ಹಿರಿತನ, ವಯೋಮಿತಿ ಹಾಗೂ ಸೇವಾನುಭವದ ಗರಿಷ್ಠತೆಯನ್ನು ಪರಿಗಣಿಸಲಾಗುವುದು. ಅರ್ಜಿಯೊಂದಿಗೆ ಕರ್ತವ್ಯ ನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಯ ವಿವರ, ಪ್ರಸಾರ ಸಂಖ್ಯೆ, ಪತ್ರಿಕೆಯ ಮಾಧ್ಯಮ ಪಟ್ಟಿಯ ವಿವರ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ದೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ 2025ನೇ ಆಗಸ್ಟ್ 22 ರ ಸಂಜೆ 5:00 ಗಂಟೆಯೊಳಗೆ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ (ಇನ್‌ಫೆಂಟ್ರಿ ರಸ್ತೆ), ಬೆಂಗಳೂರು-560001 ಇವರಿಗೆ ಸಲ್ಲಿಸಬೇಕು. ಲಕೋಟೆಯ ಮೇಲ್ಭಾಗದಲ್ಲಿ "ನೋಂದಾಯಿತ ಪತ್ರಕರ್ತರಿಗೆ ಮೀಡಿಯಾ ಕಿಟ್ ಗಾಗಿ ಅರ್ಜಿ" ಎಂದು ನಮೂದಿಸಿರಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಗಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಘವೇಂದ್ರ ಸ್ವಾಮಿಗಳ ಆರಾಧನೆಯ ನಿಮಿತ್ತ ರಾಯರ ರಥೋತ್ಸವ ಕಾರ್ಯಕ್ರಮ

# ನಂಬಿದ ಭಕ್ತರನ್ನು ರಾಯರು ಕೈಬಿಡರು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ರಾಘವೇಂದ್ರ ಸ್ವಾಮಿಗಳ ಆರಾಧನೆಯ ನಿಮಿತ್ತ ಕೊನೆಯ ದಿನವಾದ ಮಂಗಳವಾರ ರಾಯರ ರಥೋತ್ಸವ ಕಾರ್ಯಕ್ರಮವು ವಿಜೃಂಭಣೆಯಿಂದ ಜರುಗಿತು. ರಥೋತ್ಸವದ ನಂತರ ಶ್ರೀಮಠದ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸೇವೆ ಸಲ್ಲಿಸಿದ ಮಹನೀಯರನ್ನು ಗೌರವಿಸಲಾಯಿತು.

ಶ್ರೀಮಠದ ಧರ್ಮದರ್ಶಿ ಹನುಮಂತಾಚಾರ್ಯ ಹೊಂಬಳ, ಸಮಾಜದ ಹಿರಿಯ ಮುಖಂಡ ಕೃಷ್ಣ ಕುಲಕರ್ಣಿ ಮಾತನಾಡಿ, ನಂಬಿದ ಭಕ್ತರನ್ನು ರಾಯರು ಕೈಬಿಟ್ಟ ಉದಾಹರಣೆಗಳಿಲ್ಲ. ನೂರಾರು ವರ್ಷಗಳ ಭವ್ಯ ಇತಿಹಾಸವನ್ನು ಹೊಂದಿರುವ ಪಟ್ಟಣದ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಎಲ್ಲರ ಸಹಾಯ-ಸಹಕಾರದಿಂದ ಆರಾಧನೆ ಸೇರಿದಂತೆ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿದ್ದು, ಸೇವೆ ಮಾಡಿದವರಿಗೆ ಇಷ್ಟಾರ್ಥಗಳನ್ನು ಈಡೇರಿಸುವ ರಾಯರ ಕಾರ್ಯಕ್ರಮವನ್ನು ಎಲ್ಲ ಸಮಾಜ ಬಾಂಧವರು ಪಾಲ್ಗೊಂಡು ಯಶಸ್ವಿಗೊಳಿಸುವ ಸಂಪ್ರದಾಯ ನಮ್ಮ ಭಾಗದಲ್ಲಿ ಉತ್ತಮ ಪರಂಪರೆಯಾಗಿದೆ. ಆರಾಧನೆ ಕಾರ್ಯಕ್ರಮ ಯಶಸ್ವಿಯಾಗಿರುವದಕ್ಕೆ ಎಲ್ಲರಿಗೂ ರಾಯರು ಆಶೀರ್ವದಿಸಲಿ ಎಂದರು.

ಈ ಸಂದರ್ಭದಲ್ಲಿ ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನಿಸ್, ವ್ಹಿ.ಎಲ್. ಪೂಜಾರ, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಚಂಬಣ್ಣ ಬಾಳಿಕಾಯಿ, ಮಹೇಶ ಹೊಗೆಸೊಪ್ಪಿನ, ಜಯಕ್ಕ ಕಳ್ಳಿ, ಶರಣು ಗೋಡಿ, ಸುನೀಲ ಮಹಾಂತಶೆಟ್ಟರ, ನಿಂಗಪ್ಪ ಬನ್ನಿ, ನೀಲಪ್ಪ ಕರ್ಜೆಕಣ್ಣವರ, ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ, ಶಂಕರ ಬೆಟಗೇರಿ, ಕೆ.ಎಸ್. ಕುಲಕರ್ಣಿ, ಎ.ಪಿ. ಕುಲಕರ್ಣಿ, ವೆಂಕಟೇಶ ಗುಡಿ, ಗುರುರಾಜ ಪಾಟೀಲಕುಲಕರ್ಣಿ, ವೇದವ್ಯಾಸ ಹೊಂಬಳ, ಅರವಿಂದ ದೇಶಪಾಂಡೆ, ಮನೋಜ ಹೊಂಬಳ, ಅನಿಲ ಕುಲಕರ್ಣಿ, ಬಾಬು ಅಳವಂಡಿ, ಶ್ರೀಪಾದರಾಜ ಹೊಂಬಳ, ಗುರುರಾಜ ಸುಳ್ಳದ, ಪ್ರಾಣೇಶ ಬೆಳ್ಳಟ್ಟಿ, ಶಿವು ವಾನ್ವಿ, ರಾಮು ಪೂಜಾರ, ರಾಘವೇಂದ್ರ ಗೊಗ್ಗಿ, ವೆಂಕಟೇಶ ಕಳ್ಳಿಮನಿ, ಕೃಷ್ಣಕುಮಾರ ಕುಲಕರ್ಣಿ, ಬಿ.ಕೆ. ಕುಲಕರ್ಣಿ, ಶ್ರೀನಿವಾಸ ಹುಲಮನಿ, ಶ್ರೀಕಾಂತ ಪೂಜಾರ, ಡಾ. ಪ್ರಸನ್ನ ಕುಲಕರ್ಣಿ, ಸೋಮನಾಥ ಪೂಜಾರ, ಮಂಜುನಾಥ ಒಂಟಿ, ಗಂಗಾಧರ ಗೋಡಿ, ರಮೇಶ ತೊರಗಲ್, ದೃವ ಬೆಟಗೇರಿ, ಕಿರಣ ನವಲೆ, ರವೀಂದ್ರ ರಾಯಚೂರ, ಗಂಗಾಧರ ಹಳ್ಳಿಕೇರಿ, ರಾಘವೇಂದ್ರ ಮಿಸ್ಕಿನ್ ಮುಂತಾದವರು ಪಾಲ್ಗೊಂಡಿದ್ದರು.

> ಮೊದಲ ದಿನವಾದ ರವಿವಾರದಿಂದಲೇ ನೂರಾರು ಜನರು ಶ್ರೀಮಠಕ್ಕೆ ಆಗಮಿಸಿ ರಾಯರ ದರ್ಶನವನ್ನು ಪಡೆದರು. ಹೊಂಬಳ ಮನೆತನದವರಿಂದ ಪೂಜಿಸ್ಪಡುತ್ತಿರುವ ಈ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಆರಾಧನೆ ಕಾರ್ಯಕ್ರಮವು ವರ್ಷದಿಂದ ವರ್ಷಕ್ಕೆ ವೈಭವಯುತವಾಗಿ ನಡೆಯುತ್ತಿದ್ದು, ಕೊನೆಯ ದಿನವಾದ ಮಂಗಳವಾರ ವಿವಿಧ ಪುಷ್ಪಗಳಿಂದ ಅಲಂಕರಿಸಿದ ರಾಯರ ವೃಂದಾವನವನ್ನು ವೀಕ್ಷಿಸಿದ ಭಕ್ತರು ಕಣ್ತುಂಬಿಕೊಂಡರು.

## ಭಕ್ತರ ಭಾವನೆಗೆ ಧಕ್ಕೆ ತರುತ್ತಿರುವವರ ಮೇಲೆ ಕ್ರಮವಾಗಲಿ

▶▶ ಮೊದಲನೇ ಪುಟದಿಂದ



ಗುರಿ ಇಲ್ಲದೆ ಸಾಗಬಾರದು ಎಂದು ಆಗ್ರಹಿಸುತ್ತೇವೆ ಹಾಗೂ ಈ ತನಿಖೆಯನ್ನು ನಿಗದಿತ ಸಮಯದಲ್ಲಿ ಮುಗಿಸಿ ವರದಿಯನ್ನು ಪಡೆದು ಎಲ್ಲಾ ಗೊಂದಲಗಳಿಗೆ ತೆರೆ ಎಳೆಯಬೇಕು.

ಈ ಎಲ್ಲ ಪ್ರಚೋದಕರಿಗೆ ಯಾರಿಂದ ಧನಸಹಾಯವಾಗುತ್ತಿದೆ ಹಾಗೂ ಸುಳ್ಳು ಆರೋಪ ಮಾಡಲು ಇವರಿಗೆ ಯಾರು ಪ್ರಚೋದನೆ ಮಾಡುತ್ತಿದ್ದಾರೆ ಎಂಬುದನ್ನು ತನಿಖೆಗೊಳಪಡಿಸಬೇಕು. ಸಾಮಾಜಿಕ ಮಾಧ್ಯಮದಲ್ಲಿ ತಮ್ಮ ಹತ್ತಿರ ಸಾಕ್ಷ್ಯಾಧಾರಗಳು ಇವೆ ಎಂದು ಘಂಟಾಘೋಷವಾಗಿ ಸಾರುತ್ತಿರುವ ಗಿರೀಶ ಮಟ್ಟೆಣ್ಣವರ ಹಾಗೂ ಇತರರ ವಿರುದ್ಧ ತನಿಖೆಯಾಗಬೇಕು. ಇವರ ಮೊಬೈಲ್, ಮನೆ ಹಾಗೂ ಕಚೇರಿಗಳನ್ನು ತನಿಖೆ ಮಾಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮುಕ್ತಣ್ಣೇಶ್ವರ ಶ್ರೀಮಠದ ಪೂಜ್ಯಶ್ರೀ ಶಂಕರಾನಂದ ಶ್ರೀಗಳು, ಗದಗ ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯರು, ದಿಗಂಬರ ಜೈನ ಸಮಾಜ, ನವಜೀವನ ಸಮಿತಿ ಸದಸ್ಯರು, ಕರ್ನಾಟಕ ರಕ್ಷಣಾ ವೇದಿಕೆ, ಅಟೋ ಚಾಲಕರ ಸಂಘ, ಹುಯಿಲಗೋಳ ಗ್ರಾ.ಪಂ ಸರ್ವ ಸದಸ್ಯರು, ಜಿಲ್ಲೆಯ ಎಲ್ಲ ತಾಲೂಕಿನ ಪ್ರಗತಿ ಬಂಧು, ಸ್ವ-ಸಹಾಯ ಸಂಘದ ಸದಸ್ಯರು, ಸಾರ್ವಜನಿಕರು ಉಪಸ್ಥಿತರಿದ್ದರು.

### ಬೆಳ್ಳಟ್ಟಿಯಲ್ಲಿ ಸಾಮೂಹಿಕ ಇಷ್ಟಲಿಂಗ ಪೂಜೆ ನೆರವೇರಿಸಿದ ಕೂಡಲಸಂಗಮ ಶ್ರೀ

# ಭಕ್ತರ ಇಷ್ಟಾರ್ಥಗಳ ಪೂರೈಸುವುದೇ ಇಷ್ಟಲಿಂಗ ಪೂಜೆ

**■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಲಿಂಗಾಯತ ಸಮುದಾಯಕ್ಕೆ ಶ್ರಾವಣ ಮಾಸ ಅತ್ಯಂತ ಪವಿತ್ರವಾಗಿದ್ದು, ಮನುಷ್ಯನ ಮನಸ್ಸನ್ನು ಶುದ್ಧೀಕರಿಸುವುದಕ್ಕಾಗಿ ಈ ಮಾಸದಲ್ಲಿ ಪ್ರವಚನ ಆಲಿಸಬೇಕು, ದಾಸೋಹ ಮಾಡಬೇಕು, ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೇ ನಿಸ್ವಾರ್ಥ ಸೇವೆಯನ್ನು ಮಾಡಬೇಕು. ಭಕ್ತರ ಇಷ್ಟಾರ್ಥಗಳನ್ನು ಪೂರೈಸುವುದೇ ಇಷ್ಟಲಿಂಗ ಪೂಜೆಯ ಮಹತ್ವವಾಗಿದೆ ಎಂದು ಕೂಡಲಸಂಗಮದ ಪಂಚಮಸಾಲಿ ಪೀಠದ ಪ್ರಥಮ ಜಗದ್ಗುರು ಬಸವಜಯ ಮೃತ್ಯುಂಜಯ ಸ್ವಾಮೀಜಿ ಹೇಳಿದರು.

ಅವರು ಬುಧವಾರ ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದಲ್ಲಿ ತಾಲೂಕಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ಶ್ರಾವಣ ಮಾಸದ ಸಾಮೂಹಿಕ ಇಷ್ಟಲಿಂಗ ಪೂಜೆ ಕಾರ್ಯಕ್ರಮದ ನೇತೃತ್ವ ವಹಿಸಿ



ಮಾತನಾಡಿದರು.

ಶಿವತತ್ವ, ಶಿವಚಿಂತನೆ ಮಾಡುವ ಮೂಲಕ ಶ್ರಾವಣ ಮಾಸವನ್ನು ಆಚರಣೆ ಮಾಡಿದಾಗ ಬದುಕು ಸುಧಾರಣೆಯಾಗಲಿದೆ. ಲಿಂಗ ಜಾತಿ ಅಲ್ಲ, ಜ್ಯೋತಿ. ಗಂಡು-ಹೆಣ್ಣು ಭೇದವಿಲ್ಲ, ಹುಟ್ಟಿನಿಂದ ಸಾವಿನವರೆಗೂ ನಮ್ಮ ಜೊತೆ ಬರುವುದು ಲಿಂಗ ಮಾತ್ರ. ಇದನ್ನು ಎಲ್ಲರೂ ಅರ್ಥೈಸಿಕೊಳ್ಳಬೇಕು. ವಿದ್ಯಾರ್ಥಿಗಳು ಪ್ರತಿನಿತ್ಯ ಇಷ್ಟಲಿಂಗ ಪೂಜೆ ಮಾಡುವುದರಿಂದ ಅವರ ಸ್ಮರಣಶಕ್ತಿ, ಏಕಾಗ್ರತೆ ಹೆಚ್ಚುತ್ತದೆ. 246 ವರ್ಷಗಳ ಹಿಂದೆ ಬ್ರಿಟಿಷರೊಡನೆ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಚೆನ್ನಮ್ಮಾಜಿ ನಮ್ಮ ಸಮಾಜದ ಅಭಿಮಾನ. ಚೆನ್ನಮ್ಮಾಜಿ ತ್ರಿಕಾಲ ಲಿಂಗಪೂಜೆಯನ್ನು ಮಾಡುತ್ತಿದ್ದರು, ಅವರ ಜೊತೆಗೆ ಅಕ್ಕಮಹಾದೇವಿ, ಬೆಳವಡಿ ಮಲ್ಲಮ್ಮ ನಮ್ಮ ಸಮಾಜದ ಹೆಮ್ಮೆ ಎಂದರು.

ಮುಂಬರುವ ದಿನಗಳಲ್ಲಿ ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕುಗಳಲ್ಲಿ ವಾಸ್ತವ್ಯ ಮಾಡಿ ಸಮಾಜದ ಸಂಘಟನೆ ಮಾಡಲಾಗುವುದು. ಜೊತೆಗೆ ಬೃಹತ್ ಸಮಾವೇಶಗಳನ್ನು ಆಯೋಜಿಸಿ ರಾಜ್ಯಮಟ್ಟದ ನಾಯಕರುಗಳನ್ನು ಕರೆಯಿಸಿ ಮೀಸಲಾತಿ ಹೋರಾಟಕ್ಕೆ ನಮ್ಮ ಶಕ್ತಿ ಪ್ರದರ್ಶನ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು ಎಂದರು.

ಇದಕ್ಕೂ ಮುನ್ನ ಕೊಟ್ರೇಶ ಅಕ್ಕೂರ ಇವರ ಮಹಾಮನೆಯಲ್ಲಿ ಶ್ರೀಗಳಿಂದ ವಿಶೇಷ ಪೂಜೆ ನೆರವೇರಿತು. ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ ಕಾರ್ಯಕ್ರಮ ಉದ್ಘಾಟಿಸಿದರು. ಪಂಚಮಸಾಲಿ ಸಂಘದ ತಾಲೂಕಾಧ್ಯಕ್ಷ ಬಿ.ಡಿ. ಪಲ್ಲೇದ ಪ್ರಾಸ್ತಾವಿಕವಾಗಿ ಮಾತನಾಡಿದರು.

ಬಿಜೆಪಿ ಮಂಡಲಾಧ್ಯಕ್ಷ ಸುನೀಲ ಮಹಾಂತಶೆಟ್ಟರ, ಸಿ.ಆರ್. ಪಾಟೀಲ, ಎಸ್.ಎಸ್. ಪಾಟೀಲ, ಚನ್ನವೀರಗೌಡ ತೆಗ್ಗಿನಮನಿ, ಅಶೋಕ ಬಳ್ಳಾರಿ, ದೇವರಾಜ ಮೇಟಿ, ಫಕ್ಕೀರೇಶ ಎಮ್ಮಿಯವರ, ಶೇಖರ ಹೈದರಿ, ಬಸವರಾಜ ಸಾಲಿ, ವಸಂತಗೌಡ ಪಾಟೀಲ, ಚನ್ನಬಸವನಗೌಡ ಪಾಟೀಲ, ಶಿವಪುತ್ರಪ್ಪ ನೆಲಗುಡ್ಡದ, ವಿಶ್ವನಾಥ ದಲಾಲಿ, ನಾಗರಾಜ ಗಡ್ಡಿ, ಬಸನಗೌಡ ಪಾಟೀಲ, ನಂದಾ ಪಲ್ಲೇದ, ಮುತ್ತಣ್ಣ ತೆ-ಊಟದ, ಅಶೋಕ ವರವಿ, ಮಂಜು ಉಳ್ಳಾಗಡ್ಡಿ, ಸುರೇಶ ವರವಿ, ಮಹೇಶ ವರವಿ, ಮಹಾದೇವಪ್ಪ ಅಣ್ಣಿಗೇರಿ, ಗಂಗಾಧರ ಮೆಣಸಿನಕಾಯಿ, ಕಾಶಣ್ಣ ಗಿಡ್ಡವೀರಪ್ಪನವರ ಮುಂತಾದವರು ಉಪಸ್ಥಿತರಿದ್ದರು.

> ಪಂಚಮಸಾಲಿ ಸಮಾಜಕ್ಕೆ 2ಎ ಮೀಸಲಾತಿಗೆ ಕೂಡಲಸಂಗಮದಿಂದ ಬೃಹತ್ ಪಾದಯಾತ್ರೆ ಮಾಡಿದ್ದು, ಇಡೀ ಜಗತ್ತಿಗೆ ಸಮಾಜದ ಸಂಘಟನೆಯನ್ನು ತೋರಿಸಿದಂತಾಗಿದೆ. ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಅವಧಿಯಲ್ಲಿಯೇ ಮೀಸಲಾತಿ ನೀಡಬೇಕಿತ್ತು. ಕೋವಿಡ್‌ನಿಂದ ಅದು ಸಾಧ್ಯವಾಗಲಿಲ್ಲ. ತದನಂತರ ಬಂದ ಸರಕಾರಕ್ಕೆ ಸಮಾಜದ ಮಕ್ಕಳ ಶಿಕ್ಷಣಕ್ಕಾಗಿ 2ಎ ಮೀಸಲಾತಿ ಪಡೆಯಲು ಹೋರಾಟ ಮಾಡಲಾಗುತ್ತಿದೆ. ಸಮಾಜಕ್ಕೆ ಮೀಸಲಾತಿ ದೊರಕುವವರೆಗೂ ಹೋರಾಟ ಕೈಬಿಡುವುದಿಲ್ಲ.
>
> **– ಜ. ಬಸವಜಯ ಮೃತ್ಯುಂಜಯ ಸ್ವಾಮೀಜಿ.**
> ಕೂಡಲಸಂಗಮ.

# ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

▶▶ ಮೊದಲನೇ ಪುಟದಿಂದ

ಸಂಸ್ಥೆಯ 50 ನೇ ವರ್ಷದ ಸುವರ್ಣ ಮಹೋತ್ಸವದ ಸಂಭ್ರಮದ ಉದ್ಘಾಟನೆಯಲ್ಲಿ ಪಾಲ್ಗೊಳ್ಳುವರು. ಸಂಜೆ 6.30 ರಿಂದ 8.30 ಗಂಟೆಗೆ ಜವಳಿ ಗಲ್ಲಿಯ ಇಂದಿರಾ ವನ ಉದ್ಘಾಟನೆ ಕಾರ್ಯಕ್ರಮ ಹಾಗೂ ಸಂಗೀತ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಹಾಗೂ ವಾಸ್ತವ್ಯ ಮಾಡುವರು.

ಆಗಸ್ಟ್ 16 ರಂದು ಬೆಳಿಗ್ಗೆ 6.30 ಗಂಟೆಗೆ ಗದಗನಿಂದ ರಸ್ತೆ ಮೂಲಕ ಹೊರಟು ಬೆಳಿಗ್ಗೆ 7.30 ಗಂಟೆಗೆ ಹುಬ್ಬಳ್ಳಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

# ಆ.16ರಂದು ಕೃಷ್ಣ ಜಯಂತಿ

▶▶ ಮೊದಲನೇ ಪುಟದಿಂದ

ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿ ಡಾ.ವೆಂಕಟೇಶ್ ಎಂ.ವಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾದ ಕೆ.ಎಂ. ಗಾಯತ್ರಿ ಅವರು ಆಗಮಿಸುವರು.

ಮುಳಗುಂದದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯರಾದ ಡಾ.ರಮೇಶ ಮ ಕಲ್ಲನಗೌಡರ ಉಪನ್ಯಾಸ ನೀಡಲಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಭಗವಾನ್ ಶ್ರೀ ಕೃಷ್ಣ ಜಯಂತಿ ಆಚರಣೆಯ ಸಮಿತಿ ಅಧ್ಯಕ್ಷರಾದ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಬಸವರಾಜ ಬಳ್ಳಾರಿ ಸ್ವಾಗತ ಕೋರಿದ್ದಾರೆ.

# ಆ.15ರಂದು ಧ್ವಜಾರೋಹಣ

▶▶ ಮೊದಲನೇ ಪುಟದಿಂದ

ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ ಆಗಮಿಸುವರು.

ಯೋಜನೆ , ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ , ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಸ್ವಾಗತ ಕೋರಿದ್ದಾರೆ.

**2025ರ ಸ್ವಾತಂತ್ರ್ಯ ದಿನಾಚರಣೆಯ ಕಾರ್ಯಕ್ರಮಗಳು:** ಆಗಸ್ಟ್ 15 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಧ್ವಜಾರೋಹಣ ಕಾರ್ಯಕ್ರಮವನ್ನು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ನೆರವೇರಿಸುವರು. ತದನಂತರ ನಾಡಗೀತೆ, ಪರೇಡ್ ವೀಕ್ಷಣೆ, ಪಥ ಸಂಚಲನ ಮತ್ತು ವಂದನೆ ಸ್ವೀಕಾರ, ಸ್ವಾತಂತ್ರ್ಯೋತ್ಸವದ ಸಂದೇಶ, ಸಾಧಕರಿಗೆ ಸನ್ಮಾನ ಹಾಗೂ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

### ಸ್ವಾತಂತ್ರ್ಯೋತ್ಸವ ದಿನಾಚರಣೆ ನಿಮಿತ್ತ ರಸಪ್ರಶ್ನೆ ಸ್ಪರ್ಧೆ


# ವಿದ್ಯಾರ್ಥಿಗಳಲ್ಲಿ ಸ್ಪರ್ಧಾ ಮನೋಭಾವನೆ ಬೆಳೆಯಲಿ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಾಲಾ ಹಂತದಲ್ಲಿ ಏರ್ಪಡಿಸುವ ಸ್ಪರ್ಧೆಗಳಲ್ಲಿ ವಿದ್ಯಾರ್ಥಿಗಳು ಸ್ವ-ಇಚ್ಛೆಯಿಂದ ಪಾಲ್ಗೊಳ್ಳಬೇಕು. ಎಲ್ಲರಲ್ಲಿಯೂ ಸ್ಪರ್ಧಾ ಮನೋಭಾವನೆ ಬೆಳೆದು ಬರಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ್ ತಿಳಿಸಿದರು.

ಅವರು ಲಕ್ಷ್ಮೇಶ್ವರ ತಾಲೂಕಾ ಆಡಳಿತ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯಗಳ ಸಹಯೋಗದಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆಯ ಪ್ರಯುಕ್ತ ದೂದ್ ಪೀರಾ ಸರ್ಕಾರಿ ಉರ್ದು ಪ್ರೌಢಶಾಲೆಯಲ್ಲಿ ಲಕ್ಷ್ಮೇಶ್ವರ ನಗರ ಮಟ್ಟದ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ರಸಪ್ರಶ್ನೆ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಇತಿಹಾಸವನ್ನು ಮರೆತವರು ಇತಿಹಾಸವನ್ನು ಸೃಷ್ಟಿಸಲಾರರು. ಸ್ವಾತಂತ್ರ್ಯ ಹೋರಾಟದ ಇತಿಹಾಸವನ್ನು ನಮ್ಮ ವಿದ್ಯಾರ್ಥಿಗಳು



ಪ್ರತಿಕ್ಷಣ ನೆನಪಿಸಿಕೊಂಡು ಅದರಿಂದ ಸ್ಫೂರ್ತಿ ಪಡೆಯಬೇಕು. ಸ್ವಾತಂತ್ರ್ಯ ಹೋರಾಟಗಾರರ ತ್ಯಾಗವನ್ನು ಸ್ಮರಿಸಬೇಕು. ಆ ಹಿನ್ನೆಲೆಯಲ್ಲಿ ಹಮ್ಮಿಕೊಂಡ ಈ ರಸಪ್ರಶ್ನೆ ಸ್ಪರ್ಧೆ ಒಂದು ಉತ್ತಮ ಪ್ರಯತ್ನವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಸ್.ಕೆ. ಹವಾಲ್ದಾರ ಮಾತನಾಡಿ, ರಸಪ್ರಶ್ನೆ ಸ್ಪರ್ಧೆಗಳು ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸ ತುಂಬುತ್ತವೆ. ಸ್ಪರ್ಧಾತ್ಮಕ ಮನೋಭಾವ ಮೂಡಿಸುತ್ತದೆ. ಇದರಿಂದ ವಿದ್ಯಾರ್ಥಿಗಳಲ್ಲಿ ಕಲಿಕೆಯು ದೃಢಗೊಳ್ಳುತ್ತದೆ ಎಂದು ಹೇಳಿದರು.

ರಸಪ್ರಶ್ನೆ ಸ್ಪರ್ಧೆಯ ಸಂಯೋಜಕ, ಪ್ರೌಢ ವಿಭಾಗದ ಬಿ.ಆರ್.ಪಿ ಈಶ್ವರ ಮೆಡ್ಲೇರಿ ಮಾತನಾಡಿ, ಪ್ರತಿ ವರ್ಷ ತಾಲೂಕು ಆಡಳಿತ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಹಯೋಗದಲ್ಲಿ ಸ್ವಾತಂತ್ರ್ಯೋತ್ಸವ ಅಂಗವಾಗಿ ದೇಶಭಕ್ತಿ ಬಿಂಬಿಸುವ ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಈ ವರ್ಷ ಪ್ರೌಢಶಾಲೆಗಳಿಗೆ ರಸಪ್ರಶ್ನೆ ಸ್ಪರ್ಧೆ, ಪ್ರಾಥಮಿಕ ವಿಭಾಗಕ್ಕೆ ರಾಷ್ಟ್ರೀಯ ನಾಯಕರು, ದೇಶಭಕ್ತರ ವೇಷಭೂಷಣ ಸ್ಪರ್ಧೆ ಹಾಗೂ ಸ್ವಾತಂತ್ರ್ಯೋತ್ಸವ ಪರೇಡ್, ದೇಶಭಕ್ತಿಯ ಸಂಸ್ಕೃತಿಕ ಕಾರ್ಯಕ್ರಮಗಳನ್ನು ಸಜ್ಜುಗೊಳಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಬಿ.ಸಿ. ಪಟ್ಟೇದ, ಎಸ್.ಡಿ.ಎಂ.ಸಿ ಸದಸ್ಯರಾದ ರಿಯಾಜ್ ಮಾರಿಹಾಳ, ಸತೀಶ ಬೋಮಲೆ, ವಿವಿಧ ಶಾಲೆಗಳಿಂದ ಆಗಮಿಸಿದ್ದ ಶಿಕ್ಷಕರು, ಶಾಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು. ಸಿ.ಆರ್.ಪಿ ಎನ್.ಎ. ಮುಲ್ಲಾ ಸ್ವಾಗತಿಸಿದರು. ಉಮೇಶ ನೇಕಾರ ವಂದಿಸಿದರು. ಲಕ್ಷ್ಮೇಶ್ವರ ನಗರ ವ್ಯಾಪ್ತಿಯ 15 ಪ್ರೌಢಶಾಲೆಗಳಿಂದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

> ಸ್ವಾತಂತ್ರ್ಯೋತ್ಸವ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ರಸಪ್ರಶ್ನೆ ಸ್ಪರ್ಧೆಯಲ್ಲಿ ವಿದ್ಯಾಪೀಠ ಪಾಠಶಾಲೆ (ಪ್ರಥಮ), ಎಸ್‌ಟಿಪಿಎಂ.ಬಿ ಆಂಗ್ಲ ಮಾಧ್ಯಮ ಶಾಲೆ (ದ್ವಿತೀಯ), ಲಿಟಲ್ ಹಾರ್ಟ್ ಇಂಟರ್ನ್ಯಾಷನಲ್ ಶಾಲೆ (ತೃತೀಯ) ಸ್ಥಾನ ಪಡೆದುಕೊಂಡಿತು.

## ಚಂಡಮಾರುತದ ಎಫೆಕ್ಟ್: ಇಂದು ಕರ್ನಾಟಕದಲ್ಲಿ ಭಾರೀ ಮಳೆ ಸಾಧ್ಯತೆ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಗದಗ, ಕಲಬುರಗಿ, ಶಿವಮೊಗ್ಗ ಸೇರಿ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಮಳೆ ಆಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ಕೊಟ್ಟಿದೆ.

ರಾಜ್ಯದ ಕರಾವಳಿ ಮತ್ತು ಕಲ್ಯಾಣ ಕರ್ನಾಟಕದ ಜಿಲ್ಲೆಗಳು ಸೇರಿದಂತೆ ರಾಜ್ಯದ ಹಲವಡೆ ಗುರುವಾರ ಭಾರಿ ಮಳೆಯಾಗುವ ಸಾಧ್ಯತೆ ಇದೆ.

ಬಂಗಾಳಕೊಲ್ಲಿಯಲ್ಲಿ ಚಂಡಮಾರುತ ಬೀಸುತ್ತಿರುವುದರಿಂದ ವಾತಾವರಣ ವೈಪರೀತ್ಯವಾಗಿದೆ. ಚಂಡಮಾರುತದ ಎಫೆಕ್ಟ್ ಕರ್ನಾಟಕಕ್ಕೆ ತಟ್ಟಿದೆ.

# ಅಂಗಾಂಗ ದಾನದ ಬಗ್ಗೆ ಜಾಗೃತಿ




**■ ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ವೈದ್ಯರು ಅಂಗಾಂಗ ದಾನದ ಬಗ್ಗೆ ಜಾಗೃತಿ ಮೂಡಿಸಲು ಯುವ ಮನಸ್ಸುಗಳನ್ನು ಪ್ರೇರೇಪಿಸುವ ಗುರಿಯನ್ನು ಹೊಂದಿದ್ದು, ಸಂಕಲ್ಪ ಕಿಡ್ನಿಕೇ ಫೌಂಡೇಶನ್ (ಖಏಅಈ) ಮತ್ತು ಲಯನ್ಸ್ ಶಾಲಾ ಮಕ್ಕಳಿಂದ ಅಂಗಾಂಗ ದಾನವನ್ನು ಪ್ರೇರೇಪಿಸುವ ಕಾರ್ಯಕ್ರಮವನ್ನು ಬುಧವಾರ ಆಯೋಜಿಸಿತ್ತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಶಾಲಾ ಮಕ್ಕಳು ಇತರರಿಗೆ ಅಂಗಾಂಗ ದಾನ ಮಾಡಲು ಪ್ರೇರೇಪಿಸಿದ್ದಕ್ಕಾಗಿ ಅಭಿನಂದಿಸಿದರು.

ಯುವ ನಾಯಕ ಕೃಷ್ಣಗೌಡ ಪಾಟೀಲ ಮಾತನಾಡಿ, ಮಕ್ಕಳು ತಮ್ಮ ಕುಟುಂಬದ ಸದಸ್ಯರನ್ನು ಅವರ ಜನ್ಮದಿನದಂದು ಅಂಗಾಂಗ ದಾನಕ್ಕಾಗಿ ನೋಂದಾಯಿಸಬೇಕೆಂದು ವಿನಂತಿಸಿದರು. ಗದುಗಿನ ಲಾಯನ್ಸ್ ಶಾಲೆ, ತೋಂಟದಾರ್ಯ ಕನ್ನಡ ಮತ್ತು ಇಂಗ್ಲಿಷ್ ಮೀಡಿಯಂ, ಜೆಸಿ ಶಾಲೆ, ಮಹಾವೀರ ಜೈನ್ ಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ವಿದ್ಯಾರ್ಥಿಗಳಾದ ಮೇಘನಾ ಲಕ್ಕುಂಡಿ, ಕೀರ್ತನಾ ಕಿಡ್ನಿ ದಾನದ ಮಹತ್ವದ ಬಗ್ಗೆ ಮಾತನಾಡಿದರು. ಗದಗ ವೈದ್ಯರ ತಂಡವು ಕಸಿ ಶಸ್ತ್ರಚಿಕಿತ್ಸಕ ಡಾ. ಅವಿನಾಶ್ ಓದುಗೌಡರ, ಯುಕೆ ಲಿವರ್‌ಪೂಲ್ ವಿಶ್ವವಿದ್ಯಾಲಯದ ಹಿರಿಯ ಕಸಿ ಶಸ್ತ್ರ ಚಿಕಿತ್ಸಕ ಡಾ. ಅಜಯ್ ಶರ್ಮಾ, ಕಸಿ ಶಸ್ತ್ರ ಚಿಕಿತ್ಸಕ ಡಾ. ಪವನ ಕೋಳಿವಾಡ, ಮೂತ್ರಪಿಂಡ ಶಾಸ್ತ್ರಜ್ಞ ಡಾ. ದೀಪಕ್ ಕುರಹಟ್ಟಿ ಅವರೊಂದಿಗೆ ಸಮರ್ಪಿತ ತಂಡವನ್ನು ಹೊಂದಿದೆ. ತಂಡವು ಡಾ. ಎಸ್.ಆರ್. ನಾಗನೂರ ಮತ್ತು ಡಾ. ಪ್ಯಾರಾಅಲಿ ನೂರಾನಿ ಅವರ ಮಾರ್ಗದರ್ಶನದಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಹುಲಕೋಟಿಯ ಆರ್.ಆರ್. ಓದುಗೌಡರ ಅವರು ತಂಡಕ್ಕೆ ಮಾರ್ಗದರ್ಶನ ನೀಡುತ್ತಿದ್ದಾರೆ.

### ಕುರಿಗಾಹಿಗಳ ಮೇಲೆ ದೌರ್ಜನ್ಯ ತಡೆ ಕಾಯ್ದೆ ಜಾರಿಗಾಗಿ ಆಗ್ರಹಿಸಿ ಆ.19ರಂದು ಬೆಂಗಳೂರು ಚಲೋ

# ಕುರಿಗಾರರ ರಕ್ಷಣೆಗೆ ವಿಶೇಷ ಕಾಯ್ದೆ ಜಾರಿಗೊಳಿಸಿ




> ಸರ್ಕಾರವು 2024-25ನೇ ಸಾಲಿನ ಬಜೆಟ್‌ನಲ್ಲಿ ಕುರಿಗಾಹಿಗಳಿಗೆ ಸಂಬಂಧಿಸಿದಂತೆ ದೌರ್ಜನ್ಯ ತಡೆ ಕಾಯ್ದೆ ರೂಪಿಸಲು ಪ್ರಸ್ತಾಪಿಸಿದ್ದು, ಈಗ ಸರ್ಕಾರವು ಆಗಸ್ಟ್ 11ರಿಂದ ಆರಂಭವಾಗಿರುವ ಅಧಿವೇಶನದಲ್ಲಿ ಕಾಯ್ದೆಯಾಗಿ ಜಾರಿಗೊಳಿಸಬೇಕೆಂದು ಆಗ್ರಹಿಸಿ 'ಕುರಿಗಾರರ ನಡಿಗೆ ವಿಧಾನಸೌಧ ಕಡೆಗೆ' ಎಂಬ ಘೋಷವಾಕ್ಯದೊಂದಿಗೆ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಆಗಸ್ಟ್ 19ರಂದು ರಾಜ್ಯದ ಎಲ್ಲಾ ಭಾಗಗಳ ಕುರಿಗಾಹಿಗಳು ಸೇರಿ ಸರ್ಕಾರವನ್ನು ಒತ್ತಾಯಿಸಲು ನಿರ್ಧರಿಸಲಾಗಿದೆ.
>
> **– ರುದ್ರಣ್ಣ ಗುಳಗುಳಿ.**
> ಹಾಲುಮತ ಮಹಾಸಭಾ ರಾಜ್ಯಾಧ್ಯಕ್ಷರು.

**■ ವಿಜಯಸಾಕ್ಷಿ ಸುದ್ದಿ, ಗದಗ**

ಮಂಡ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕುರುಬ ಸಮಾಜದ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದ ಆರೋಪಿಗಳನ್ನು ಗಡಿಪಾರು ಮಾಡಬೇಕು ಮತ್ತು ಕುರಿಗಾರರ ರಕ್ಷಣೆಗೆ ವಿಶೇಷ ಕಾಯ್ದೆ ಜಾರಿ ಮಾಡಬೇಕು ಎಂದು ಪ್ರದೇಶ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕಿರಪ್ಪ ಹೆಬಸೂರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ಇತ್ತೀಚೆಗೆ ಅರಣ್ಯ ಸಚಿವರು ಕಾಡಿನಲ್ಲಿ ಕುರಿಗಳನ್ನು ಬಿಡಬಾರದು ಎಂದು ಹೇಳಿರುವದು ಖಂಡನೀಯ. ಕುರಿಗಾರರ ರಕ್ಷಣೆಗಾಗಿ ಕುರುಬರ ಸಂಘ ಮತ್ತು ಹಾಲುಮತ ಮಹಾಸಭಾದಿಂದ ಪಕ್ಷಾತೀತವಾಗಿ ಹೋರಾಟ ಮಾಡಲಾಗುವದು ಎಂದು ಹೇಳಿದರು.

ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ ಮಾತನಾಡಿ, ರಾಜ್ಯದಲ್ಲಿರುವ ಶೋಷಿತ ಸಮುದಾಯಗಳು ಹಾಗೂ ಹಿಂದುಳಿದ ವರ್ಗಗಳು ಕುರಿಗಾರಿಕೆ ಮೂಲಕ ಕುಟುಂಬದ ಆರ್ಥಿಕ ಪರಿಸ್ಥಿತಿ ಹಾಗೂ ಜೀವನವನ್ನು ನಿಭಾಯಿಸುತ್ತಿದ್ದಾರೆ. ಬೆಟ್ಟ-ಗುಡ್ಡಗಳನ್ನು ಒಳಗೊಂಡಂತೆ ಆಯಾ ಪ್ರದೇಶಕ್ಕನುಗುಣವಾಗಿ ಸ್ಥಳೀಯವಾಗಿ ಹಾಗೂ ಹೊರಗೂ ಸಂಚರಿಸುವ ಮೂಲಕ ಪಾಲನೆ ಮಾಡುತ್ತಿದ್ದು, ಈ ಕುರಿಗಾರಿಕೆ ಬಡವರ ಪಾಲಿಗೆ ವರದಾನವಾಗಿದೆ. ಆದರೆ ಆಧುನಿಕತೆ ಮತ್ತು ಅಭಿವೃದ್ಧಿಯ ಹೆಸರಿನಲ್ಲಿ ಕುರಿಗಳಿಗೆ ಮೇವು ಸಿಗದಂತಾಗಿದ್ದು, ಕುರಿಗಾರರ ಮೇಲೆ ನಿರಂತರವಾಗಿ ದೌರ್ಜನ್ಯಗಳು ನಡೆಯುತ್ತಿರುವ ಉದಾಹರಣೆಗಳಿವೆ. ರಾಜ್ಯದಲ್ಲಿರುವ ಗುಡ್ಡುಗಾಡು ಪ್ರದೇಶಗಳಲ್ಲಿ ಕುರಿ ಮೇಯಿಸಲು ಹೋದಾಗ ಅರಣ್ಯ ಇಲಾಖೆಯ ಅಧಿಕಾರಿಗಳಿಂದ ಹಾಗೂ ಸಿಬ್ಬಂದಿಗಳಿಂದ ನಿರಂತರ ಕಿರುಕುಳ, ದೌರ್ಜನ್ಯಗಳು ನಡೆಯುತ್ತಿವೆ ಎಂದರು.

ಕುರಿಗಾಹಿಕೆಯಿಂದ ಜೀವನ ನಡೆಸುತ್ತಿರುವ ಕುರಿಗಾರ ಮತ್ತು ಆತನ ಪರಿವಾರದ ಮೇಲೆ ಆಗುತ್ತಿರುವ ನಿರಂತರ ದೌರ್ಜನ್ಯಗಳಂತಹ ದುಷ್ಕೃತ್ಯಗಳ ಕಡಿವಾಣಕ್ಕಾಗಿ ಸಾಂಪ್ರದಾಯಿಕ ಕುರಿಗಾಹಿಗಳ ಹಿತರಕ್ಷಣಾ ಕಾಯ್ದೆಯನ್ನು ರೂಪಿಸಿ ಜಾರಿಗೆ ತರಬೇಕೆಂದು ಸರ್ಕಾರವನ್ನು ಆಗ್ರಹಿಸಿದರು.

ಈ ಸಂದರ್ಭದಲ್ಲಿ ನಾಗರಾಜ ಮೆಣಸಗಿ, ನಾಗಪ್ಪ ಗುಗ್ಗರಿ, ಸೋಮನಗೌಡ ಪಾಟೀಲ, ಬಸಪ್ಪ ಶಿರೂರ, ರಾಘು ವಗ್ಗನವರ, ಮೋಹನ ಇಮರಾಪೂರ, ಮುತ್ತು ಜಡಿ, ಸತೀಶ ಗಿಡ್ಡಹನುಮಣ್ಣವರ, ಹನುಮಂತ ಗಿಡ್ಡಹನುಮಣ್ಣವರ, ಆನಂದ ಜೋಗಾಡಿ, ಬಸಪ್ಪ ಗಿಡ್ಡಹನುಮಣ್ಣವರ ಮುಂತಾದವರು ಉಪಸ್ಥಿತರಿದ್ದರು.

# ತರಬೇತಿಗಾಗಿ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

2025-26ನೇ ಸಾಲಿನಲ್ಲಿ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಖೇಲೋ ಇಂಡಿಯಾ ಸೈಕ್ಲಿಂಗ್ ಕೇಂದ್ರ ತೆರೆಯಲು ಆಯುಕ್ತರ ಆದೇಶದಲ್ಲಿ ತಿಳಿಸಲಾಗಿದೆ.

ಅದರನ್ವಯ ಜಿಲ್ಲಾಧಿಕಾರಿಗಳ ಆದೇಶದಂತೆ ಸೈಕ್ಲಿಂಗ್ ತರಬೇತುದಾರರನ್ನು ನಿಯೋಜಿಸಲಾಗಿದ್ದು, ಸದರಿ ಖೇಲೋ ಇಂಡಿಯಾ ಕೇಂದ್ರಕ್ಕೆ ಸೈಕ್ಲಿಂಗ್ ಕ್ರೀಡೆಯಲ್ಲಿ ತರಬೇತಿ ಪಡೆಯಲು ಆಸಕ್ತ 8 ರಿಂದ 15 ವರ್ಷದೊಳಗಿನ, 15 ಬಾಲಕ ಹಾಗೂ 15 ಬಾಲಕಿ ಕ್ರೀಡಾಪಟುಗಳು ಒಟ್ಟು 30 ಬಾಲಕ ಮತ್ತು ಬಾಲಕಿ ಕ್ರೀಡಾಪಟುಗಳನ್ನು ಆಯ್ಕೆ ಮಾಡಲಾಗುತ್ತಿದೆ. ಗದಗ ಜಿಲ್ಲೆಯ ಆಸಕ್ತ ಕ್ರೀಡಾಪಟುಗಳು ಅರ್ಜಿ ಸಲ್ಲಿಸಬಹುದಾಗಿದೆ.

ಖೇಲೋ ಇಂಡಿಯಾ ಕೇಂದ್ರಕ್ಕೆ ತರಬೇತಿ ಪಡೆಯುವ ಆಸಕ್ತ ಬಾಲಕ ಮತ್ತು ಬಾಲಕಿ ಕ್ರೀಡಾಪಟುಗಳು ಅಗಸ್ಟ್ 26 ರೊಳಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ದೂರವಾಣಿ ಸಂಖ್ಯೆ 08372-238345 ಇಲ್ಲಿ ನಿಗದಿತ ಅರ್ಜಿ ಪಡೆದು ಭರ್ತಿ ಮಾಡಿ ಖುದ್ದಾಗಿ ಸಲ್ಲಿಸಬಹುದಾಗಿದೆ.

### ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ ಆರ್ ನೇತೃತ್ವದಲ್ಲಿ ಸಕಾಲ ಪ್ರಗತಿ ಪರಿಶೀಲನಾ ಸಭೆ

# ಕಾಲಮಿತಿಯೊಳಗೆ ಸೇವೆ ಒದಗಿಸುವುದು ನಮ್ಮ ಹೊಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವಜನಿಕರಿಗೆ ಸರ್ಕಾರದ ಎಲ್ಲ ಸೇವೆಗಳು ನಿಗದಿತ ಅವಧಿಯಲ್ಲಿ ತಲುಪುವಂತೆ ಮಾಡುವ ಉದ್ದೇಶದಿಂದ ಜಾರಿಗೊಳಿಸಿರುವ ಸಕಾಲ ಯೋಜನೆಯ ಅನುಷ್ಠಾನದಲ್ಲಿ ಇನ್ನಷ್ಟು ಕಾರ್ಯಕ್ಷಮತೆ ತರಲು ಹಾಗೂ ಗಡುವು ಮೀರುವ ಅರ್ಜಿಗಳ ನಿವಾರಣೆಗಾಗಿ ಇಲಾಖಾ ಅಧಿಕಾರಿಗಳು ಗಮನ ನೀಡಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಸೂಚಿಸಿದರು.

ಬುಧವಾರ ಜಿಲ್ಲಾಡಳಿತ ಭವನದಲ್ಲಿ ಏರ್ಪಡಿಸಲಾಗಿದ್ದ ಜಿಲ್ಲಾಮಟ್ಟದ ಸಕಾಲ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಾರ್ವಜನಿಕರು ಸಕಾಲ ಮೂಲಕ ಅರ್ಜಿ ಸಲ್ಲಿಸಿದ ದಿನಾಂಕದಿಂದಲೇ ಕಾಲಮಿತಿಯೊಳಗೆ ಸೇವೆ ಒದಗಿಸುವುದು ನಮ್ಮ ಹೊಣೆಗಾರಿಕೆ. ಯಾವುದೇ ಇಲಾಖೆಯಲ್ಲೂ ವಿನಾಕಾರಣ ವಿಳಂಬಕ್ಕೆ ಆಸ್ಪದ ನೀಡಬೇಡಿ. ಕಾಲಮಿತಿ ಮೀರಿ ಉಳಿದಿರುವ ಅರ್ಜಿಗಳನ್ನು ತಕ್ಷಣ ನಿಯಮಾನುಸಾರ ವಿಲೇವಾರಿಗೊಳಿಸಿ ಎಂದು ತಿಳಿಸಿದರು.

ಕಾಲಮಿತಿಯಲ್ಲಿ ಅರ್ಜಿ ವಿಲೇವಾರಿ ಮಾಡಬೇಕೆನ್ನುವ ಒತ್ತಡದಿಂದಾಗಿ ಅನಗತ್ಯ ಅರ್ಜಿಗಳ ತಿರಸ್ಕಾರ ಮಾಡಬೇಡಿ. ನಿಯಮಾನುಸಾರ ಅರ್ಜಿ ತಿರಸ್ಕಾರ ಮಾಡಲು ಕ್ರಮ ವಹಿಸಬೇಕು. ತಪ್ಪಿದಲ್ಲಿ ಇಲಾಖಾಧಿಕಾರಿಗಳು ಶಿಕ್ಷೆ, ದಂಡ ಹಾಗೂ ಇಲಾಖಾ ವಿಚಾರಣೆಗೆ ಒಳಪಡಬೇಕಾದೀತು ಎಂದು ಎಚ್ಚರಿಸಿದರು.

ಸಕಾಲ ಯೋಜನೆ ಕುರಿತು ಇಲಾಖಾ ಮುಖ್ಯಸ್ಥರು ಸರಿಯಾಗಿ ತಿಳುವಳಿಕೆ ಹೊಂದಬೇಕು. ಸಕಾಲ ಯೋಜನೆಯನ್ನು 2011ರಿಂದ ಆರಂಭಗೊಳಿಸಲಾಗಿದೆ. ಪ್ರಸ್ತುತ 1173 ಸೇವೆಗಳನ್ನು ಸಕಾಲ ಯೋಜನೆಯಡಿ ಸಾರ್ವಜನಿಕರಿಗೆ ಒದಗಿಸಲಾಗುತ್ತಿದೆ. ಸಕಾಲ ಯೋಜನೆಯಡಿ ಅರ್ಜಿ ಸಲ್ಲಿಸುವವರು ಗ್ರಾಮ ಒನ್, ಕರ್ನಾಟಕ ಒನ್, ನಾಡಕಚೇರಿ, ಸಿಎಸ್‌ಸಿ ಸೆಂಟರ್ ಮೂಲಕ ಅರ್ಜಿ ಸಲ್ಲಿಸುತ್ತಾರೆ. ಅವರು ಸಲ್ಲಿಸಿದ ಅರ್ಜಿಗಳು ಸರಿಯಿದ್ದಲ್ಲಿ ಶೀಘ್ರ ವಿಲೇವಾರಿ ಮಾಡುವ ಮೂಲಕ ಸಕಾಲ ಯೋಜನೆಯಲ್ಲಿ ಉತ್ತಮ ಪ್ರಗತಿ ಸಾಧಿಸೋಣ ಎಂದು ತಿಳಿಸಿದರು. ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ಇಲಾಖೆಯ ಸಕಾಲ ಯೋಜನೆಯಡಿ ಸಾಧಿಸಿದ ಪ್ರಗತಿ ಅಂಕಿ ಅಂಶಗಳನ್ನು ಹಾಗೂ ವಿಳಂಬ ವಿಲೇವಾರಿ ಮಾಡಿದ ಕುರಿತಂತೆ ತಾಂತ್ರಿಕ ತೊಂದರೆಗಳ ಕುರಿತು ಸಭೆಯ ಗಮನಕ್ಕೆ ತಂದರು. ಜೊತೆಗೆ ಮುಂದಿನ ಹಂತದಲ್ಲಿ ಕಾಲಮಿತಿಯಲ್ಲಿಯೇ ಅರ್ಜಿ ವಿಲೇವಾರಿ ಮಾಡಲಾಗುವುದೆಂದು ತಿಳಿಸಿದರು. ಸಭೆಯಲ್ಲಿ ಕೃಷಿ ಜಂಟಿ ನಿರ್ದೇಶಕಿ ತಾರಾಮಣಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಮೆಹಬೂಬ ತುಂಬರಮಟ್ಟಿ, ಡಿಡಿಪಿಐ ಆರ್.ಎಸ್. ಬುರುಡಿ, ಕೆ.ಎಸ್.ಆರ್.ಟಿ.ಸಿ ವಿಭಾಗೀಯ ನಿಯಂತ್ರಣಾಧಿಕಾರಿ ದೇವರಾಜ, ಡಿಡಿಎಲ್‌ಆರ್ ರುದ್ರಣ್ಣಗೌಡ ಜಿ.ಜೆ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಅಲ್ಪಸಂಖ್ಯಾತರ ಇಲಾಖೆ ಜಿಲ್ಲಾ ಅಧಿಕಾರಿ ಅಮಿತ ಬಿದರಿ, ಪಶು ಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ. ಹುಲಗಣ್ಣವರ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.



ಸಕಾಲ ಪ್ರಗತಿಯಲ್ಲಿ ರಾಜ್ಯದಲ್ಲಿ ಗದಗ ಜಿಲ್ಲೆ 8ನೇ ಸ್ಥಾನದಲ್ಲಿದೆ. ಜಿಲ್ಲೆಯಲ್ಲಿ ಜುಲೈ 2025ರ ಅಂತ್ಯದವರೆಗೆ ಸಕಾಲ ಯೋಜನೆಯಡಿ 67154 ಅರ್ಜಿಗಳನ್ನು ಸ್ವೀಕರಿಸಲಾಗಿದೆ. 68305 ಅರ್ಜಿಗಳನ್ನು ವಿಲೇವಾರಿ ಮಾಡಿದ್ದು, 5873 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. 1039 ಅರ್ಜಿಗಳನ್ನು ಕಾಲಮಿತಿ ನಂತರ ಹಾಗೂ 67266 ಅರ್ಜಿಗಳನ್ನು ನಿಗದಿತ ಕಾಲಮಿತಿಯಲ್ಲಿ ವಿಲೇವಾರಿ ಮಾಡಲಾಗಿದೆ. ಆಗಸ್ಟ್ ಮಾಹೆಯಲ್ಲಿ ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ 1157 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. 251 ಅರ್ಜಿಗಳನ್ನು ಗಡುವು ಮೀರಿದ ನಂತರ ವಿಲೇವಾರಿಗೊಳಿಸಲಾಗಿದೆ.

ಸಕಾಲ ಯೋಜನೆಯಡಿ ಹಲವು ಯೋಜನೆಗಳನ್ನು ಸೇರ್ಪಡೆಗೊಳಿಸಲಾಗಿದೆ. ಈ ಬಗ್ಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆಗೆ ಸಂಬಂಧಿಸಿದ ಯೋಜನೆಗಳ ಕುರಿತಂತೆ ಮೊದಲು ಅರಿತುಕೊಂಡು ನಂತರ ಸಕಾಲದಲ್ಲಿಯೇ ಅರ್ಜಿ ಸ್ವೀಕರಿಸಿ ಸೇವೆ ಒದಗಿಸಬೇಕು. ಝೀರೋ ರಿಸಿಪ್ಟ್ ಇರುವಂತಹ ಇಲಾಖೆಯ ಯೋಜನೆಗಳ ಕುರಿತು ಮುಖ್ಯಸ್ಥರು ಸಾರ್ವಜನಿಕರಿಗೆ ಸರಿಯಾಗಿ ಮಾಹಿತಿ ನೀಡುವ ಮೂಲಕ ಸಕಾಲದಲ್ಲಿಯೇ ಅರ್ಜಿ ಸ್ವೀಕರಿಸಿ ಪರಿಹಾರ ನೀಡಬೇಕು.

**– ಡಾ. ದುರಗೇಶ್ ಕೆ.ಆರ್.**
ಅಪರ ಜಿಲ್ಲಾಧಿಕಾರಿಗಳು, ಗದಗ.

## ಲಕ್ಷಾಧಿಪತಿ ಕ್ವಿಜ್‌ಗೆ ಪ್ರಣವ ಕುಂದಗೋಳ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಶಿರಹಟ್ಟಿಯ ಎಫ್.ಎಂ. ಡಬಾಲಿ ಮಾಹಾವಿದ್ಯಾಲಯದಲ್ಲಿ ಕರುನಾಡ ಯುವ ಹೊಸ ಬೆಳಕು-ಕರುನಾಡ ಲಕ್ಷಾಧಿಪತಿ ಯುಟ್ಯೂಬ್ ಕ್ವಿಜ್ ಸ್ಪರ್ಧೆಯಲ್ಲಿ ಮುಳಗುಂದ ಪಟ್ಟಣದ ಬಿ.ಎಂ.ಎಸ್ ಆಂಗ್ಲ ಮಾಧ್ಯಮ ಶಾಲೆಯ 1ನೇ ತರಗತಿಯ ವಿದ್ಯಾರ್ಥಿ ಪ್ರಣವ ಕುಂದಗೋಳ ಭಾಗವಹಿಸಿ ಆಯ್ಕೆಯಾಗಿದ್ದಾನೆ.



ಈ ಬಾಲಕನನ್ನು ಬಾಲಲೀಲಾ ಶಿಕ್ಷಣ ಸಮಿತಿಯ ಅಧ್ಯಕ್ಷ ಎಂ.ಡಿ. ಬಟ್ಟೂರ, ಕಾರ್ಯದರ್ಶಿ ಡಾ. ಎಸ್.ಸಿ. ಚವಡಿ, ಶಾಲಾ ಮುಖ್ಯೋಪಾಧ್ಯಾಯ ಅಭಿನಂದಿಸಿದ್ದಾರೆ.

## ಆ. 23ರಂದು ಉದ್ಯೋಗ ಮೇಳ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿರುವ ವಿಕಲಚೇತನ ಉದ್ಯೋಗಾಕಾಂಕ್ಷಿಗಳಿಗೆ ದಿ.23/08/2025 ರಂದು BES Degree College Of Arts, Commerce & Science , No. 27, 16th T Block East, 4th Block , Jayanagar ಬೆಂಗಳೂರಿನಲ್ಲಿ ಉದ್ಯೋಗ ಮೇಳ ಆಯೋಜಿಸಲಾಗಿದೆ.

ಈ ಉದ್ಯೋಗ ಮೇಳದಲ್ಲಿ ಹೆಚ್ಚು ಅಂಗವಿಕಲ ಫಲಾನುಭವಿಗಳು ಭಾಗವಹಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಹೆಚ್ಚಿನ ಮಾಹಿತಿಗಾಗಿ ವೀರಬಧ್ರ ಪಾಟೀಲ್:** ಮೊ.ಸಂ.9480812121 ( placements@samarthanam.org ), **ಸುಭಾಷ್:** ಮೊ.ಸಂ.9449864693 (centerhead Bangalore@samarthanam.org ) ಇಲ್ಲಿ ಸಂಪರ್ಕಿಸಬಹುದಾಗಿದೆ.

### ಕದಳಿ ಶ್ರೀ ವೇದಿಕೆಯಿಂದ ಅಮೃತ ಭೋಜನ-ಜ್ಞಾನ ಸಿಂಚನ ಮಾಲಿಕೆ-12

# ನಾವು ಮನುಜರು ಎಂಬ ಮೌಲ್ಯವಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ನಾವು ಮನುಜರು. ಇದು ಮಾನವೀಯ ಮೌಲ್ಯ. ಮಾನವ ಸಂಬಂಧಗಳನ್ನು ನಿರ್ವಹಿಸಲು ಮೌಲ್ಯಗಳು ಸಾಧನವಾಗಿವೆ. ಮೌಲ್ಯಗಳು ಕೇವಲ ಜ್ಞಾನ ನೀಡುವುದಷ್ಟೇ ಅಲ್ಲದೆ, ಜೀವನವನ್ನು ಅರಿತು ಸಮಾಜದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲು, ಸಂತಸದಾಯಕ ಜೀವನ ನಡೆಸಲು ಅಗತ್ಯವಾದ ಅಡಿಪಾಯವನ್ನು ಒದಗಿಸುತ್ತವೆ. ಮಕ್ಕಳು ಉತ್ತಮ ಮೌಲ್ಯಗಳ ಬಾಂಧವ್ಯದೊಂದಿಗೆ ಬೆಳೆಯಬೇಕು ಎಂದು ಚಿಂತಕಿ ಪ್ರೊ. ಸುಮತಿ ಗದಗಿನಮಠ ಹೇಳಿದರು.

ಅವರು ಗದುಗಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.15ರಲ್ಲಿ ಗದಗ ಜಿಲ್ಲಾ ಶರಣೆ ಶ್ರೀ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆಯಿಂದ ಶ್ರಾವಣಮಾಸದ ಅಂಗವಾಗಿ ಜರುಗಿದ ಅಮೃತ ಭೋಜನ ಜ್ಞಾನ ಸಿಂಚನ-ಮಾಲಿಕೆ 12ರ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸಿಹಿ ವಿತರಿಸಿ ಮೌಲ್ಯಗಳ ಕುರಿತು ಮಾತನಾಡಿದರು.



ಮಕ್ಕಳು ಉತ್ತಮ ನಡತೆಯೊಂದಿಗೆ ಜವಾಬ್ದಾರಿಯುತ ನಾಗರಿಕರಾಗಿ ಬೆಳೆಯಲು ಸಮುದಾಯದಲ್ಲಿ ಮೌಲ್ಯಗಳನ್ನು ಬಿತ್ತಿ-ಬೆಳೆಸುವ ಪರಿಸರ ನಿರ್ಮಾಣವಾಗಬೇಕು. ಕುಟುಂಬ, ಶಾಲೆ, ಸಮಾಜ ಮಕ್ಕಳ ಪ್ರಗತಿಗೆ ಪೂರಕವಾಗಿ ಉತ್ತಮ ನಡಾವಳಿಗಳನ್ನು ಅವರಲ್ಲಿ ಒಡಮೂಡಿಸಲು ಪ್ರಯತ್ನಿಸಬೇಕು. ನಾವು ಮನುಜರು ಎಂಬುದನ್ನು ನಾವು ಮಕ್ಕಳಿಗೆ ಅರ್ಥೈಸುವ ಕಾರ್ಯ ನಿರಂತರವಾಗಿ ನಡೆದಲ್ಲಿ ಉತ್ತಮ ಬೆಳವಣಿಗೆ ಆಗುವುದು ಎಂದರು. ಅತಿಥಿಗಳಾಗಿ ಆಗಮಿಸಿದ್ದ ಚಿಂತಕಿ ಮೀನಾಕ್ಷಿ ಕೊರವಣ್ಣವರ ಮಾತನಾಡಿ, ನಾವು ಪಡೆಯುವ ವಿದ್ಯೆಯು ವಿನಯ ಹಾಗೂ ನಮ್ರತೆಗೆ ದಾರಿಯಾಗಬೇಕು. ವಿದ್ಯಾವಂತನು ವಿನಯವಂತನಾದರೆ ವಿಶ್ವವೇ ಅವನೆಡೆಗೆ ಬಾಗುತ್ತದೆ. ಮಕ್ಕಳು ಭಾವಿ ಭವಿಷ್ಯತ್ತಿನ ರೂವಾರಿಗಳು. ಅವರ ಮಹತ್ತರ ಸಾಧನೆಗೆ ನಾವು ಕೈಜೋಡಿಸಬೇಕು. ಶಿಸ್ತು ಬದುಕಿನಲ್ಲಿ ಬಹಳ ಮುಖ್ಯ. ಮಕ್ಕಳು ಶಿಸ್ತನ್ನು ರೂಢಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯೆ ವಿ.ಎಸ್. ಬಸಾಪೂರ ಮಾತನಾಡಿ, ಮಕ್ಕಳು ಬಾಲ್ಯದಲ್ಲಿಯೇ ಸದ್ಗುಣಗಳನ್ನು ರೂಢಿಸಿಕೊಳ್ಳಬೇಕು. ದುಶ್ಚಟಗಳಿಂದ ದೂರವಿದ್ದು ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕು. ಸಜ್ಜನರ ಸಂಘ ಹೆಜ್ಜೇನು ಸವಿದಂತೆ ಎಂಬುದನ್ನು ತಿಳಿದು- ಅರಿತು ಅದರಂತೆ ನಡೆಯಬೇಕು ಎಂದರು. ಕಾರ್ಯಕ್ರಮದ ಪ್ರಾಯೋಜಕರಾದ ವಾಣಿ ಲೋಕೇಶ ಪಾಟೀಲ (ಅಬ್ಬಿಗೇರಿ), ಪ್ರೊ. ಸುಮತಿ ಗದುಗಿನಮಠ, ಮೀನಾಕ್ಷಿ ಕೊರವಣ್ಣವರ ಇವರನ್ನು ಕದಳಿಶ್ರೀ ವೇದಿಕೆಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಪ್ರಾರಂಭದಲ್ಲಿ ವಿಶೇಷ ಚೇತನ ಪ್ರತಿಭಾನ್ವಿತ ಮಗು ಕೃಷ್ಣಪ್ರಿಯಾ ಬದಿ ವಚನ ಪ್ರಾರ್ಥನೆಗೈದರು. ಸಂಪನ್ಮೂಲ ವ್ಯಕ್ತಿ ಟಿ.ಎಸ್. ಹೂಗಾರ ಸ್ವಾಗತಿಸಿದರು. ಪಿ.ಎಸ್. ಬ್ಯಾಳಿ ನಿರೂಪಿಸಿದರು. ವಿ.ಬಿ. ಕರಬಸನಗೌಡ್ರ ಪರಿಚಯಿಸಿದರು. ಬಿ. ಯಶೋಧಾ ವಂದಿಸಿದರು. ನಿವೇದಿತಾ ಸಂಶಿ, ರೇಣುಕಾ ಗೌಳಿಕೇರ, ಗಿರಿಜಾ ದಾಸರ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಪ್ರಾಸ್ತಾವಿಕವಾಗಿವಾಗಿ ಮಾತನಾಡಿದ ಕವಿತಾ ಬೇಲೇರಿ, ಹಿರಿಯರ ಅನುಭವದಂತಹ ಅದ್ಭುತವಾದ ವರ್ಗಕೋಣೆ ಈ ಜಗತ್ತಿನಲ್ಲಿಯೇ ಇಲ್ಲ. ಏಕೆಂದರೆ ಅಲ್ಲಿರುವುದು ಅನುಭವದ ಪಾಠಗಳು. ಮಕ್ಕಳು ಸಾಧನೆಯನ್ನು ಗುರಿಯಾಗಿ ಇಟ್ಟುಕೊಂಡು ಮುನ್ನಡೆಯಬೇಕು. ಸಾಧ್ಯವೇ ಇಲ್ಲ ಎಂಬ ಭಾವನೆ ಬೇಡ. ನಾವು ಹಾಗೆ ಅಂದುಕೊಂಡರೆ ಏನನ್ನೂ ಸಾಧಿಸಲಾಗದು. ಪ್ರಯತ್ನವಾದಿಗಳಾಗಿರಬೇಕು. ಗೆದ್ದರೆ ಸಂತೋಷವಾಗುತ್ತದೆ. ಸೋತರೆ ಅನುಭವ ಸಿಗುತ್ತದೆ. ಹಿರಿಯರ ಮಾತುಗಳನ್ನು ಮಕ್ಕಳು ಆಲಿಸಬೇಕು ಎಂಬ ಉದ್ದೇಶದೊಂದಿಗೆ ಕದಳಿಶ್ರೀ ವೇದಿಕೆಯು ಅನುಭವಿಕರನ್ನು ಅಮೃತ ಭೋಜನಕ್ಕೆ ಅಹ್ವಾನಿಸಿ ಮಕ್ಕಳಿಗೆ ಹಿತನುಡಿಗಳನ್ನು ಕೇಳಿಸುವ ಕಾರ್ಯ ನಡೆಯುತ್ತಿದೆ ಎಂದರು.

## ಕದಳಿ ಮಹಿಳಾ ಸಮ್ಮೇಳನಕ್ಕೆ ಶರಣೆ ಗಿರಿಜಕ್ಕ ಧರ್ಮರೆಡ್ಡಿ ಸರ್ವಾಧ್ಯಕ್ಷೆ



■ವಿಜಯಸಾಕ್ಷಿ ಸುದ್ದಿ, ಗದಗ

ಆಗಸ್ಟ್ 24ರಂದು ಗದುಗಿನ ಶ್ರೀ ಜಗದ್ಗುರು ತೋಂಟ-ದಾರ್ಯ ಕಲ್ಯಾಣ ಮಂಟಪದಲ್ಲಿ ನಡೆಯಲಿರುವ ಗದಗ ಜಿಲ್ಲಾ ದ್ವಿತೀಯ ಕದಳಿ ಮಹಿಳಾ ಸಮ್ಮೇಳನಕ್ಕೆ ಗದುಗಿನ ಶರಣೆ ಗಿರಿಜಕ್ಕ ಧರ್ಮರೆಡ್ಡಿ ಅವರನ್ನು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ಪರಿಷತ್ತಿನ ಗೌರವಾಧ್ಯಕ್ಷರಾದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮೀಜಿಯವರ ನೇತೃತ್ವದಲ್ಲಿ ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾದ ಸುಧಾ ಹುಚ್ಚಣ್ಣವರ ತಿಳಿಸಿದರು.

ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆಯ ಪರವಾಗಿ ಶರಣೆ ಗಿರಿಜಕ್ಕನವರ ನಿವಾಸಕ್ಕೆ ಭೇಟಿ ನೀಡಿ, ಅವರಿಗೆ ಅಧಿಕೃತವಾಗಿ ಆಮಂತ್ರಣ ನೀಡಿದ ಸಂದರ್ಭದಲ್ಲಿ ಅವರು ಮಾತನಾಡಿದರು. ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಕೆ.ಎ. ಬಳಿಗೇರ ಮಾತನಾಡಿ, ಗಿರಿಜಕ್ಕನವರು ತಮ್ಮ ಹೃದಯದ ತುಂಬಾ ಶರಣರ ವಿಚಾರಗಳನ್ನು ತುಂಬಿಕೊಂಡವರು. ಶರಣರ ತತ್ವಚಿಂತನೆ, ಅಧ್ಯಯನ, ಬರವಣಿಗೆಯಲ್ಲಿ ತಮ್ಮನ್ನು ತೊಡಗಿಸಿಕೊಂಡು ಶರಣರ ತತ್ವಗಳನ್ನು ಈ ನಾಡಿನಲ್ಲಿ ಅಷ್ಟೇ ಅಲ್ಲದೆ ಪಕ್ಕದ ಆಂಧ್ರದಲ್ಲೂ ತಮ್ಮ ಪ್ರವಚನಗಳ ಮೂಲಕ ಪ್ರಸಾರ ಮಾಡಿದ್ದಾರೆ .ಶರಣರು ಕಂಡ ಅನಾದಿ ಬಸವಣ್ಣ-ವಚನ ಸಂಕಲನ, ವಚನ ವ್ಯಾಖ್ಯಾನ ಮತ್ತು ವಚನಾಧಾರಿತ ಲೇಖನಗಳನ್ನೊಳಗೊಂಡ ಅಪರೂಪದ ಕೃತಿಗಳನ್ನು ಬರೆದು ಪ್ರಕಟಿಸಿದ್ದಾರೆ. ಗಿರಿಜಕ್ಕ ಧರ್ಮರೆಡ್ಡಿ ಅವರು ನಮ್ಮ ಸಮ್ಮೇಳನಕ್ಕೆ ಸರ್ವಾಧ್ಯಕ್ಷರಾಗಿ ಆಯ್ಕೆ ಆಗಿರುವುದು ಜಿಲ್ಲೆಯ ಶರಣ ಸಾಹಿತಿಗಳಿಗೆ ಸಂತಸವನ್ನುಂಟು ಮಾಡಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶರಣೆ ರತ್ನಕ್ಕ ಪಾಟೀಲ್, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಬೂದಪ್ಪ ಅಂಗಡಿ, ಗದಗ ನಗರ ಘಟಕದ ಅಧ್ಯಕ್ಷ ಪ್ರಕಾಶ ಅಸುಂಡಿ, ತಾಲೂಕು ಕದಳಿ ವೇದಿಕೆಯ ಅಧ್ಯಕ್ಷೆ ಸುಲೋಚನ ಐಹೊಳೆ, ಎನ್. ಎಚ್. ಸಕ್ರಗೌಡರ್, ಎಸ್.ಎಮ್. ಮುಗದ, ಅಶ್ವಥ್ ರೆಡ್ಡಿ, ಕದಳಿ ವೇದಿಕೆಯ ಅನ್ನಪೂರ್ಣ ವರವಿ, ಗೌರಕ್ಕ ಬಡಿಗಣ್ಣವರ್, ರೇಖಾ ಯಾಪಲಪರ್ವಿ ಮುಂತಾದವರು ಇದ್ದರು.



**ಗದಗ:** ಇದು ವಾರ್ಡ್ ನಂ.11ರಲ್ಲಿ ಬರುವ ಅಬ್ದುಲ್ ಕಲಾಂ ಶಾದಿ ಹಾಲ್ ಬಳಿಯ ಶಿವಬಸವ ನಗರದ 3ನೇ ಕ್ರಾಸ್‌ನ ರಸ್ತೆಯ ದುಸ್ಥಿತಿ. ಕೂಡಲೇ ಸಂಬಂಧಿಸಿದ ನಗರಸಭೆಯ ಸದಸ್ಯರು ಹಾಗೂ ಅಧಿಕಾರಿಗಳು ರಸ್ತೆ ದುರಸ್ತಿಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲು ಸ್ಥಳೀಯರು ಒತ್ತಾಯಿಸಿದ್ದಾರೆ.

## ರಾಧಾ-ಕೃಷ್ಣ ವೇಷ ಭೂಷಣ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಶ್ರೀಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಇಲ್ಲಿಯ ಕೃಷ್ಣ ಮಂದಿರದ ಆವರಣದಲ್ಲಿ ರಾಧಾ-ಕೃಷ್ಣ ವೇಷ ಭೂಷಣ ಹಾಗೂ ಮಹಿಳೆಯರಿಗೆ ರಂಗೋಲಿ ಸ್ಪರ್ಧೆಯನ್ನು ಆಗಸ್ಟ್ 17ರಂದು ಹಮ್ಮಿಕೊಳ್ಳಲಾಗಿದೆ.

ಇಲ್ಲಿಯ ಯಾದವ ಸಮಾಜ ಮತ್ತು ಕೃಷ್ಣ ಯುವಕ ಮಂಡಳದ ಆಶ್ರಯದಲ್ಲಿ ಕೃಷ್ಣ ಜನ್ಮಾಷ್ಟಮಿ ಆಚರಿಸಲಾಗುತ್ತಿದ್ದು, ಮುಂಜಾನೆ ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಕುಂಭ ಮೇಳ, ಶ್ರೀಕೃಷ್ಣ ಮೂರ್ತಿಯನ್ನು ಗ್ರಾಮದ ಪ್ರಮುಖ ಬೀದಿಯಲ್ಲಿ ಮೆರವಣಿಗೆ ನಡೆಸಲಾಗವುದು. ದೇವಸ್ಥಾನ ಆವರಣದಲ್ಲಿ ಮೊಸರು ಗಡಿಗೆ ಒಡೆಯುವ ಕಾರ್ಯಕ್ರಮ ನೆರವೇರಲಿದೆ.

ಮುಂಜಾನೆ 6ರಿಂದ 8ರವರೆಗೆ ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆ ಏರ್ಪಡಿಸಲಾಗಿದ್ದು, ಪ್ರಥಮ 2001 ರೂ, ದ್ವಿತೀಯ 1501 ರೂ ಮತ್ತು ತೃತೀಯ ಬಹುಮಾನವಾಗಿ 1001 ರೂ ನೀಡಲಾಗುವುದು. ಮೆರವಣಿಗೆಯ ನಂತರ ಕೃಷ್ಣ ದೇವಸ್ಥಾನದ ಆವರಣದಲ್ಲಿ ವೇಷಭೂಷಣ ಸ್ಪರ್ದೆಗಳು ಜರುಗಲಿವೆ.

ಪ್ರಥಮ 2001 ರೂ, ದ್ವಿತೀಯ 1501 ರೂ, ತೃತೀಯ 1001 ರೂ ಬಹುಮಾನ ನೀಡಲಾಗವುದು. ನಂತರ ಅನ್ನಸಂತರ್ಪಣೆ ನಡೆಯಲಿದೆ ಎಂದು ಯುವಕ ಮಂಡಳದ ಪ್ರಕಟಣೆ ತಿಳಿಸಿದೆ.

## ನನಗೆ ಸಂಸತ್‌ಗೆ ಹೋಗುವ ಆಸೆ ಇಲ್ಲ, ರಾಜ್ಯದಲ್ಲೇ ಇರುತ್ತೇನೆ: ಸಿಎಂ ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನನಗೆ ಸಂಸತ್‌ಗೆ ಹೋಗುವ ಆಸೆ ಇಲ್ಲ, ರಾಜ್ಯದಲ್ಲೇ ಇರುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ವಿಧಾನಸೌಧದಲ್ಲಿ ರಸಗೊಬ್ಬರ ಅಭಾವದ ಚರ್ಚೆ ವೇಳೆ ನಡೆದ ಗದ್ದಲ ಕುರಿತು ಸದಸ್ಯರಿಗೆ ಪಾಠ ಮಾಡುವ ಸಂದರ್ಭದಲ್ಲಿ ಸಿಎಂ ಈ ಸ್ಪಷ್ಟನೆ ನೀಡಿದರು. ವಿಪಕ್ಷ ನಾಯಕ ಆರ್ ಅಶೋಕ್ ನೀವು ಕೇಂದ್ರಕ್ಕೆ ಹೋಗಿ ಎಂದು ಸಿದ್ದರಾಮಯ್ಯರವನ್ನು ಕಾಲೆಳೆದರು. ಇದಕ್ಕೆ ಸಿಎಂ, ನಾನು ಇಲ್ಲಿರೋದು ಇಷ್ಟ ಇಲ್ವಾ ನಿನಗೆ? ನನ್ನನ್ನು ಇಲ್ಲಿಂದ ಕಳಿಸಬೇಕು ಅನ್ಕೊಂಡಿದ್ದೀಯಾ ಎಂದು ಮರು ಪ್ರಶ್ನೆ ಹಾಕಿದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಆರೋಗ್ಯ ಅಭಿಯಾನದ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳ ಕಾರ್ಯಕ್ರಮದಡಿಯಲ್ಲಿ ಗುತ್ತಿಗೆ ಆಧಾರ ಮೇಲೆ ಒಟ್ಟು 01 ಕೀಟ ಸಂಗ್ರಹಕಾರ ಹುದ್ದೆ ಹೊಸದಾಗಿ ಅನುಮೋದನೆಯಾಗಿದ್ದು. ಸದರಿ ಹುದ್ದೆಗೆ ಮೆರಿಟ್ ಆದಾರದ ಮೇಲೆ ನಿಬಂಧನೆಗೊಳಪಟ್ಟು ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಸದರಿ ಹುದ್ದೆಗೆ ಅಪ್ಲೋಡ್ ಆಗಿರುವ ಅರ್ಜಿಗಳಲ್ಲಿ ಮೆರಿಟ್ ಆದಾರದ ಮೇಲೆ ತಯಾರಿಸಿದ ಅರ್ಹ ಅಭ್ಯರ್ಥಿಯ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಾಗಿ ಆಗಸ್ಟ್ 21 ರೊಳಗಾಗಿ ಕಚೇರಿ ದಿನಗಳಲ್ಲಿ ಖುದ್ದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ, ಕಚೇರಿ, ಜಿಲ್ಲಾಡಳಿತ ಭವನ, ರೂಮ್ ನಂ:101 ಹುಬ್ಬಳ್ಳಿ ರೋಡ್, ಗದಗ ಇಲ್ಲಿಗೆ ಆಕ್ಷೇಪಣೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಯನ್ನು ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ, ಕಚೇರಿಯ ಸೂಚನಾ ಫಲಕದಲ್ಲಿ ಲಗತ್ತಿಸಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka